ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 174 RNI Number : KNKAN/25/A2770 02-07-2026 Thursday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :174 ರಾಯಚೂರು 02-07-2026 ಗುರುವಾರ ಪುಟ 04 ಬೆಲೆ ರೂ.2/- ಮೊ:8660146563

ಮತದಾರರಿಗೆ ಎನ್ಯೂಮರೇಶನ್ ಫಾರ್ಮ ನೀಡುವುದಕ್ಕೆ ಕ್ರಮ: ಭೀಮರಾಯ ಬಿ.ರಾಮಸಮುದ್ರ



ಮಾನ್ವಿ,ಜು.01-

ಪಟ್ಟಣದಲ್ಲಿ ಮಾನ್ವಿ ವಿಧಾನ ಸಭಾ ಕ್ಷೇತ್ರದಲ್ಲಿ ಸಮಗ್ರ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಭಾಗವಾಗಿ ಇಂದು ನಡೆದ ಮೊದಲನೇ ದಿನದ ಎನ್ಯೂಮರೇಶನ್ ಫಾರ್ಮ ವಿತರಣೆಯನ್ನು ಸಹಾಯಕ ಜಿಲ್ಲಾಧಿಕಾರಿಗಳಾದ ಶಿವಾನಂದ ಭಜಂತ್ರಿ ಹಾಗೂ ರಾಯಚೂರು ಸಹಾಯಕ ವಿಭಾಗಾಧಿಕಾರಿ ಹಂಪ್ಪಣ್ಣ ಸಜ್ಜನ್ ಪರಿಶೀಲಿಸಿದರು.

ಇಂದು ಬೆಳಿಗ್ಗೆಯಿಂದಲೇ ಪಟ್ಟಣದಲ್ಲಿ ಮನೆ ಮನೆಗೆ ತೆರಳಿ ಬಿ.ಎಲ್.ಓ. ಅಧಿಕಾರಿಗಳು ಮತದಾರರಿಗೆ ಎನ್ಯೂಮರೇಶನ್ ಫಾರ್ಮ ವಿತರಣೆಯನ್ನು ಮಾಡಿ ತುಂಬಿದ ಫಾರ್ಮ ಅನ್ನು ಮರಳಿ ಪಡೆದು ಡಿಜಟಲೀಕರಣ ಗೊಳಿಸಿದರು.

ತಹಶೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ರವರು ಮಾತನಾಡಿ ಮಾನ್ವಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಮಾನ್ವಿ ಮತ್ತು ಸಿರವಾರ ತಾಲೂಕಿನಲ್ಲಿ 276 ಬೂತ್‌ಗಳಲ್ಲಿ ಒಟ್ಟು 2 ಲಕ್ಷ 45ಸಾವಿರ ಮತದಾರರಿಗೆ ಎನ್ಯೂಮರೇಶನ್ ಫಾರ್ಮ ನೀಡುವುದಕ್ಕೆ ಪ್ರತಿ ಬೂತ್‌ಗೆ ಒಬ್ಬರಂತೆ ಬಿ.ಎಲ್.ಓ.ಗಳನ್ನು ನೇಮಕ

4ನೇ ಪುಟ.....

ವಿಪ್ರೋತ್ಸವ-2026 ಸಂಭ್ರಮಕ್ಕೆ ರಾಯಚೂರು ಸಜ್ಜು

ರಾಯಚೂರು,ಜು.1-

ರಾಯಚೂರು ಜಿಲ್ಲಾ ಬ್ರಾಹ್ಮಣ ಮಹಾಸಭಾ ವತಿಯಿಂದ ವಿಪ್ರೋತ್ಸವ-2026 ಅಂಗವಾಗಿ ಪ್ರತಿಭಾ ಪುರಸ್ಕಾರ ಹಾಗೂ ವಿಪ್ರಶ್ರೀ ಪ್ರಶಸ್ತಿ ಪ್ರದಾನ ಸಮಾರಂಭ ಜುಲೈ 4ರಂದು ಶನಿವಾರ ಸಂಜೆ 5 ಗಂಟೆಗೆ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಅದ್ದೂರಿಯಾಗಿ ನಡೆಯಲಿದೆ.



ನಗರದ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಜಿಲ್ಲಾ ಬ್ರಾಹ್ಮಣ ಮಹಾಸಭಾದ ಜಂಟಿ ಕಾರ್ಯದರ್ಶಿ ರಮೇಶ್ ಕುಲಕರ್ಣಿ, ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿಯಲ್ಲಿ ಶೇ.75ಕ್ಕಿಂತ ಹೆಚ್ಚು ಅಂಕ ಗಳಿಸಿದ ರಾಯಚೂರು ಜಿಲ್ಲೆಯ 120ಕ್ಕೂ ಹೆಚ್ಚು ಪ್ರತಿಭಾವಂತ ವಿದ್ಯಾರ್ಥಿ- ವಿದ್ಯಾರ್ಥಿನಿಯರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುವುದು ಎಂದರು.

ಸಮಾಜ ಸೇವೆ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆ ಮಾಡಿದ ಗಣ್ಯರಿಗೆ ನೀಡುವ ★'ವಿಪ್ರಶ್ರೀ ಪ್ರಶಸ್ತಿ'★ಗೆ ಈ ಬಾರಿ ಪುರುಷರ ವಿಭಾಗದಲ್ಲಿ ರಾಘವೇಂದ್ರ ಕುಪ್ಪಿಗಿ ಹಾಗೂ ಮಹಿಳಾ ವಿಭಾಗದಲ್ಲಿ ಉಷಾಬಾಯಿ ಶ್ರೀನಿವಾಸರಾವ್ ದೇಸಾಯಿ (ಕಡದಿನಿ) ಆಯ್ಕೆಯಾಗಿದ್ದಾರೆ. ಅಲ್ಲದೆ ಪಿಎಚ್.ಡಿ., ಚಾರ್ಟರ್ಡ್ ಅಕೌಂಟೆಂಟ್ ಸೇರಿದಂತೆ ವಿವಿಧ ಶೈಕ್ಷಣಿಕ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ನಾಲ್ವರು ಪ್ರತಿಭಾವಂತರನ್ನು ವಿಶೇಷವಾಗಿ ಸನ್ಮಾನಿಸಲಾಗುವುದು ಎಂದು ತಿಳಿಸಿದರು.

ಮಾಜಿ ಸಚಿವ ದಿನೇಶ್ ಆರ್. ಗುಂಡೂರಾವ್ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಮಾಜಿ ಸಚಿವ ಎನ್.ಎಸ್. ಬೋಸರಾಜು, ಸಂಸದ ಜಿ. ಕುಮಾರ ನಾಯಕ್, ಶಾಸಕರಾದ ಡಾ. ಎಸ್. ಶಿವರಾಜ ಪಾಟೀಲ, ಬಸನಗೌಡ ದದ್ದಲ್, ಎ. ವಸಂತಕುಮಾರ್ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ರಾಜ್ಯಾಧ್ಯಕ್ಷ ಎನ್. ರಘುನಾಥ್, ಬ್ರಾಹ್ಮಣ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಅಸುಂಡಿ ಜಯಸಿಂಹ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ.

ಖ್ಯಾತ ಚಿಂತಕ ಹಾಗೂ ಉಪನ್ಯಾಸಕ ರೋಹಿತ್ ಚಕ್ರತೀರ್ಥ ಮುಖ್ಯ ಭಾಷಣಕಾರರಾಗಿ ವಿಶೇಷ ಉಪನ್ಯಾಸ ನೀಡಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಬ್ರಾಹ್ಮಣ ಮಹಾಸಭಾ ಅಧ್ಯಕ್ಷ ರಮೇಶ್ ಕುಲಕರ್ಣಿ ವಹಿಸಲಿದ್ದು, ಜಿಲ್ಲೆಯ ಬ್ರಾಹ್ಮಣ ಸಮಾಜದ ಬಂಧುಗಳು ಹೆಚ್ಚಿನ

4ನೇ ಪುಟ.....

ಆಕಾಶವಾಣಿ ಕೇಂದ್ರದಲ್ಲಿ ವಯೋ ನಿವೃತ್ತಿಗೊಂಡ ಹಿರಿಯ ಟೆಕ್ನಿಷಿಯನ್ ಆಂಜನೇಯ್ಯರಿಗೆ ಬೀಳ್ಕೊಡುಗೆ

ರಾಯಚೂರು,ಜು.1-

ರಾಯಚೂರು ಆಕಾಶವಾಣಿ ಕೇಂದ್ರದಲ್ಲಿ ಹಿರಿಯ ಟೆಕ್ನಿಷಿಯನ್ ಆಂಜನೇಯ್ಯ ಅವರ ಸೇವಾನಿವೃತ್ತಿ ಕಾರ್ಯಕ್ರ ಮ ಜರುಗಿತು.

ಇಂದು ಆಕಾಶವಾಣಿ ಸಭಾಂಗಣದಲ್ಲಿ ಜರುಗಿದ ಕಾರ್ಯಕ್ರಮದಲ್ಲಿ ಅಕಾರಿಗಳು, ಉದ್ಘೋಷಕರು, ಸಿಬ್ಬಂದಿಗಳು, ಸ್ನೇಹಿತರು ಪಾಲ್ಗೊಂಡು ಸೇವಾನಿವೃತ್ತಿಗೆ ಶುಭ ಹಾರೈಸಿ ಸನ್ಮಾನಿಸಿ ಅಭಿನಂದಿಸಿದರು.



ಕಾರ್ಯಕ್ರಮದಲ್ಲಿ ಮಾತನಾಡಿದ ಕಾರ್ಯಕ್ರಮ ಮುಖ್ಯಸ್ಥ ವೆಂಕಟೇಶ ಬೇವಿನಬೆಂಚಿ, ನೇರ, ಸ್ನೇಹ ಜೀವಿಯಾಗಿ ಸುಮಾರು 35 ವರ್ಷಗಳ ಕಾಲ ಒಂದೇ ಕಡೆ ಉತ್ತಮ ಕೆಲಸ ಮಾಡಿ ಅಪಾರ ಪ್ರೀತಿ ಗಳಿಸಿದ ಆಂಜನೇಯ್ಯ ಅವರ ನಡೆಯನ್ನು ಶ್ಲಾಘಿಸಿದರು.

ನಿವೃತ್ತಿಯ ನಂತರ ಸಮಾಜಮುಖಿ ಸೇವೆಯಲ್ಲಿ ತೊಡಗಿಸಿಕೊಂಡು ಕುಟುಂಬದ ಜೊತೆ ಹೆಚ್ಚೆಚ್ಚು ಸಮಯ ಕಳೆಯಲಿ, ಉತ್ತಮ ಆರೋಗ್ಯ ಅವರದ್ದಾಗಲಿ ಎಂದು ಹಾರೈಸಿದರು.

ನಿವೃತ್ತ ಕಾರ್ಯಕ್ರಮ ಮುಖ್ಯಸ್ಥ ಡಾ.ವಿ.ಜಿ.ಬಾವಲತ್ತಿ ಮಾತನಾಡಿ, ಕಳೆದ 35 ವರ್ಷಗಳಲ್ಲಿ ಉತ್ತಮ ಸೇವೆ ಸಲ್ಲಿಸಿ ಸಮಯ ಪಾಲನೆ ಜೊತೆಗೆ ಶಿಸ್ತನ್ನು ಪಾಲಿಸಿಕೊಂಡು ಬಂದಿರುವ ಆಂಜನೇಯ್ಯ ಅವರು ಸೇವೆಗೆ ಸೇರಿದ್ದು ಇಲ್ಲಿಯೇ, ಸೇವಾ ನಿವೃತ್ತಿ ಹೊಂದುತ್ತಿರುವುದು ಇಲ್ಲಿಯೇ ಆಗಿರುವುದು ಅಪರೂಪ ಎಂದ ಅವರು ತಮ್ಮ ಅವರ ನಡುವಿನ ಸ್ನೇಹ, ಉದ್ಯೋಗದಲ್ಲಿಯ ಒಡನಾಟವನ್ನು ಮೆಲಕು ಹಾಕಿದರು.

ಉದ್ಘೋಷಕಿ, ಆಂಜನೇಯ್ಯ ಅವರ ಪತ್ನಿ ಅನಿತಾ ಮಾತನಾಡಿ ಕೆಲ ಸಿನಿಮಾ ಹಾಡುಗಳ ಮೂಲಕ ತಮ್ಮ ಬದುಕಿನ ಮೆಲಕು ಹಾಕಿದ ಪರಸ್ಪರ ಪ್ರೀತಿ, ಗೌರವ ಅಭಿವ್ಯಾವದ

4ನೇ ಪುಟ.....

ಏಗನೂರು: ಕಾರಹುಣ್ಣಿಮೆ ಪ್ರಯುಕ್ತ ಮನಸೆಳೆದ ಭಾರದ ಕಲ್ಲು ಎಳೆಯುವ ಸ್ಪರ್ಧೆ

.ರಾಯಚೂರು,ಜು.01-

ತಾಲೂಕಿನ ಏಗನೂರು ಗ್ರಾಮದಲ್ಲಿ ರೈತರ ಹಬ್ಬವಾದ ಕಾರಹುಣ್ಣಿಮೆ ಅಂಗವಾಗಿ



ಜೋಡೆತ್ತುಗಳ ಒಂದು ಟನ್ ಭಾರದ ಕಲ್ಲು ಎಳೆಯುವ ಸ್ಪರ್ಧೆಯನ್ನು ಅದ್ದೂರಿಯಾಗಿ ಆಯೋಜಿಸ' ಲಾಗಿತ್ತು. ಕಾರ್ಯಕ್ರ ಮದ ಅಂಗವಾಗಿ ಭಾರವಾದ ಕಲ್ಲುಗಳಿಗೆ ವಿಶೇಷ ಪೂಜೆ ಸಲ್ಲಿಸಿ ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷರಾದ ಶ್ರೀನಿವಾಸ್ ಏಗನೂರು ಹಾಗೂ ನಾಗಪ್ಪ ತಾತನವರು ಒಂದು ಟನ್ ಕಲ್ಲಿನ ಮೇಲೆ ಎತ್ತುಗಳಿಗೆ ಬಾರಕೋಲು ತೋರಿಸುವ ಮೂಲಕ ಸ್ಪರ್ಧೆಗೆ ಚಾಲನೆ ನೀಡಿದರು.ಈ ಸ್ಪರ್ಧೆಯಲ್ಲಿ ಒಂಬತ್ತು ಜೋಡೆತ್ತುಗಳ ಭಾರದ ಕಲ್ಲು ಎಳೆಯುವ ಮೂಲಕ ಶಕ್ತಿ ಪ್ರದರ್ಶಿಸಿದವು. ಕಲ್ಲು ಎಳೆಯುವ ಸ್ಪರ್ಧೆಗೆ ಶ್ರೀನಿವಾಸ್ ಏಗನೂರು ಅವರು ಚಾಲನೆ ನೀಡಿ ಮಾತನಾಡಿ, ಕಾರಹುಣ್ಣಿಮೆಯ ಮರುದಿನದಂದು ರೈತರು ಸಂಭ್ರಮದಿಂದ ಆಚರಿಸುವ ಈ ಎತ್ತುಗಳ ಭಾರ ಎಳೆಯುವ ಸ್ಪರ್ಧೆ ಯಶಸ್ವಿಯಾಗಲಿ ಎಂದು ಹಾರೈಸಿದರು.

ರೈತರು ಸೋಲು -ಗೆಲುವನ್ನು ಸಮಾನ ಮನೋಭಾವದಿಂದ ಸ್ವೀಕರಿಸಬೇಕು. ಕೃಷಿ ಚಟುವಟಿಕೆ ಮುನ್ನಡೆ ಸಾಧಿಸುವ ಈ ಕಾರಹುಣ್ಣಿಮೆ ಹಬ್ಬವನ್ನು ರೈತರು ಅತ್ಯಂತ ಸಂಭ್ರಮದಿಂದ ಆಚರಣೆ ಮಾಡುವ ಮೂಲಕ ಕೃಷಿ ಚಟುವಟಿಕೆಯಲ್ಲಿ ತೊಡಗು ಕೊಳ್ಳುತ್ತಿದ್ದಾರೆ. ಈ ಹಬ್ಬ ರೈತರಿಗೆ ಸಂತಸದ ಹಬ್ಬವಾಗಿದ್ದು, ಪ್ರತಿ ವರ್ಷ ಕಾರಹುಣ್ಣಿಮೆ ಸಂಭ್ರಮ ಸಡಗರದಿಂದ ಆಚರಣೆ ಮಾಡಲಾಗುವುದು ಎಂದರು.

ಬಾರದ ಎಳೆಯುವ ಸ್ಪರ್ಧೆಯಲ್ಲಿ ವಿಜೇತಗೊಂಡ ಶ್ರೀನಿವಾಸ್ ತಂದೆ ಸಣ್ಣ ಬಸಪ್ಪ ಅವರ ಜೋಡತ್ತುಗಳು

ಪ್ರಥಮ ಸ್ಥಾನ, ದೊಡ್ಡಪ್ಪ ತಂದೆ ಕರಿಯಪ್ಪ ಅವರ ಎತ್ತುಗಳು ದ್ವಿತೀಯ ಸ್ಥಾನ ಹಾಗೂ ಕಾಶಪ್ಪ ಅವರ ಎತ್ತುಗಳು ತೃತೀಯ ಸ್ಥಾನ ಪಡೆದುಕೊಂಡಿವೆ. ಪ್ರಥಮ ಸ್ಥಾನ ಎತ್ತುಗಳಿಗೆ 5000, ರೂ, ದ್ವಿತೀಯ 3000 ರೂ ಹಾಗೂ ತೃತೀಯ 2000 ರೂ ಬಹುಮಾನ ವಿತರಿಸಲಾಯಿತು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಮಾಜಿ ಸದಸ್ಯ ಈರೇಶ, ಊರಿನ ಗ್ರಾಮಸ್ಥರು ರೈತರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಮುಂದೆಯೂ ಮಳೆಯಾಗದಿದ್ದರೆ ರಾಜ್ಯದಲ್ಲಿ ಬರ ಪರಿಸ್ಥಿತಿ ಎದುರಿಸಲು ಕ್ರಿಯಾಯೋಜನೆ ಸಿದ್ಧ: ಡಿಸಿಎಂ

ಬೆಳಗಾವಿ

ಈಗಾಗಲೇ ರಾಜ್ಯದಲ್ಲಿ ಭರದ ಛಾಯೆ ಕಾಣಿಸುತ್ತಿದೆ. ಕುಡಿಯುವ ನೀರಿನ ಸಮಸ್ಯೆ ಪ್ರಾರಂಭ ಆಗಿದೆ. ಮುಂದೆಯೂ ಮಳೆ ಬರದೇ ಹೋದರೆ ಇತಿಹಾಸದಲ್ಲೇ, ಯಾವತ್ತೂ ಕಂಡು ಕೇಳರಿಯದ ಪರಿಸ್ಥಿತಿ ಉದ್ಭವಿಸಲಿದೆ ಎಂದು ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಕಳವಳ ವ್ಯಕ್ತಪಡಿಸಿದ್ದಾರೆ.

ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಬೆಳಗಾವಿ ಕಂದಾಯ ವಿಭಾಗದ 7 ಜಿಲ್ಲೆಗಳ ಸಮಸ್ಯೆಗಳ ಬಗ್ಗೆ ಇಂದು ಪ್ರಗತಿ ಪರಿಶೀಲನೆ ನಡೆಸಿದ್ದೇನೆ. ವಿಶೇಷವಾಗಿ ಮಳೆ ಕಡಿಮೆ ಆಗಿರುವ ಸಂದರ್ಭದಲ್ಲಿ ಕುಡಿಯುವ ನೀರು, ನಿರುದ್ಯೋಗ, ಬೆಳೆಗಳ ಹಾನಿ ಅಥವಾ ಬಿತ್ತನೆ ಆಗದಿರುವ ಪರಿಣಾನ ಜನರ ಮೇಲೆ ಯಾಗ ರೀತಿ ಆಗಿದೆ ಎಂಬುದನ್ನು ಪರಿಶೀಲಿಸಿ, ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು ಎಂಬ ಬಗ್ಗೆ ಅಪರ ಮುಖ್ಯ ಕಾರ್ಯದರ್ಶಿಗಳಿಂದ ಹಿಡಿದು, ಎಲ್ಲ ಆಯುಕ್ತರ ಜೊತೆಗೆ ಚರ್ಚಿಸಿ, ಸೂಚನೆ ನೀಡಿದ್ದೇವೆ ಎಂದರು.

ಬೆಳಗಾವಿ ವಿಭಾಗದ ಏಳು ಜಿಲ್ಲೆಗ್ಗಳಲ್ಲಿ ಅತ್ಯಂತ ಕಡಿಮೆ ಮಳೆ ಆಗಿದೆ. ವಾಡಿಕೆಗಿಂತ ಕೇವಲ ಶೇ.25-30ರಷ್ಟು ಮಾತ್ರ ಮಳೆ ಆಗಿದೆ. ಪ್ರಗತಿ ಪರಿಶೀಲನೆ ನಡೆಸಿದಾಗ ಸ್ಪಷ್ಟ ಚಿತ್ರಣ ಗೊತ್ತಾಗಲಿದೆ. ಈ ಭಾಗದ ಎಲ್ಲ ಜಲಾಶಯಗಳು ಅತ್ಯಂತ ಕೆಳಮಟ್ಟಕ್ಕೆ ತಲುಪಿವೆ. ಹೀಗಾಗಿ, ಕುಡಿಯುವ ನೀರು



ಹೇಗೆ ಒದಗಿಸಬೇಕು ಎಂಬುದು ಸೇರಿ ಇನ್ನಿತರ ವಿಷಯಗಳ ಬಗ್ಗೆ ಚರ್ಚಿಸಿದ್ದೇವೆ. ಅಲ್ಲದೇ ರಾಜ್ಯಮಟ್ಟದಲ್ಲಿ ಕ್ರಿಯಾಯೋಜನೆ ಸಿದ್ಧಪಡಿಸಿಕೊಂಡಿದ್ದೇವೆ. ಅದನ್ನು ಎಲ್ಲ ಜಿಲ್ಲಾಧಿಕಾರಿಗಳು ಅವರ ಜಿಲ್ಲೆಯಲ್ಲಿ ಅನುಷ್ಠಾನಕ್ಕೆ ತರುತ್ತಾರೆ. ಈಗಾಗಲೇ ಪಿಡಿ ಖಾತೆಯಲ್ಲಿ ಪ್ರತಿ ಜಿಲ್ಲೆಗೆ ಕುಡಿಯುವ ನೀರು ಒದಗಿಸಲು ಅಂತಾನೇ ಐದು ಕೋಟಿ ಹಣ ಇಟ್ಟಿದ್ದೇವೆ. ಇನ್ನಿತರ ಕಾಮಗಾರಿಗಳಿಗೆ ಬೇರೆ ಅನುದಾನ ಒದಗಿಸಲಾಗುವುದು ಎಂದು ಹೇಳಿದರು.

ಕೆಲವು ಕಡೆ ಬಿತ್ತನೆಯೇ ಆಗಿಲ್ಲ. ಜುಲೈ ತಿಂಗಳಲ್ಲಿ ಮಳೆ ಬಂದು ಬಿತ್ತನೆ ಆದರೆ, ಅದು ತಡವಾಗಿ ಬಿತ್ತನೆ ಆಗಬಹುದು. ಒಂದು ವೇಳೆ, ಜುಲೈನಲ್ಲೂ ಮಳೆ ಆಗದೇ ಇದ್ದರೂ, ಆ ಭೀಕರ ಪರಿಸ್ಥಿತಿ ಉದ್ಭವಿಸಲಿದೆ. ಅಂತಹ ಸಮಯದಲ್ಲಿ ಏನು ಮಾಡಬೇಕೊ ಮಾಡುತ್ತೇವೆ ಎಂದರು.

ಧಾರ್ಮಿಕ ಇಲಾಖೆಯಲ್ಲಿ ಎಬಿಸಿ ವರ್ಗದ ಬಹಳಷ್ಟು ದೇವಸ್ಥಾನಗಳಲ್ಲಿ ಕಡೆ ಜಮೀನು, ಜಾಗ ಒತ್ತುವರಿ ಆಗಿರುವುದು ಕಂಡು ಬಂದಿದೆ. ಅವುಗಳನ್ನು ಸರ್ವೆ ಮಾಡಿಸಿ, ಹದ್ದುಬಸ್ತ್ ಮಾಡಿಸಿ, ಒತ್ತುವರಿ ಆಗಿದ್ದರೆ ಅವುಗಳನ್ನು ತೆರವು ಮಾಡುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ಕೊಟ್ಟಿದ್ದೇನೆ. ಹೆಚ್ಚು ಭಕ್ತರು ಹೋಗುವ ಸವದತ್ತಿ ಯಲ್ಲಮ್ಮ ದೇವಸ್ಥಾನ ಪ್ರಾಧಿಕಾರ ಇದೆ. ಮಾಸ್ಟರ್ ಪ್ಲಾನ್ ಪ್ರಕಾರ ಭಕ್ತರಿಗೆ ಯಾವುದೇ ತೊಂದರೆ ಆಗದಂತೆ ವ್ಯವಸ್ಥೆ ಕಲ್ಪಿಸಬೇಕು. ದೇವಸ್ಥಾನದ ಹುಂಡಿಗೆ ಬರುವ ಹಣ ಅದರ ಅಭಿವೃದ್ಧಿಗೆ ಬಳಸಬೇಕು. ಪ್ರಾಧಿಕಾರ ಇಲ್ಲದ ಕಡೆ ಅವರು ನೇರವಾಗಿ ಸರ್ಕಾರಕ್ಕೆ ಪ್ರಸ್ತಾವನೆ ಕಳಿಸಬೇಕು. ಅದನ್ನು ನಾವು ಪರಿಶೀಲನೆ ನಡೆಸಿ, ಆಡಳಿತಾತ್ಮಕ ಅನುಮೋದನೆ ನೀಡಲಾಗುವುದು ಎಂದು ಹೇಳಿದರು.

ಯಾವುದೇ ಕಾರಣಕ್ಕೂ ಯಾವುದೇ ದೇವಸ್ಥಾನದಲ್ಲಿ ಹಣ ಪೋಲಾಗಲು ಬಿಡುವುದಿಲ್ಲ. ಅಯೋಧ್ಯೆಯಲ್ಲಿ ಆಗಿರುವ ಘಟನೆ ನಮಗೆ ಎಲ್ಲರಿಗೂ ಎಚ್ಚರಿಕೆ ಗಂಟೆ ಕೊಟ್ಟಿದೆ. ನಮ್ಮ ಎ, ಬಿ ಕೆಟಗೇರಿ ಎಲ್ಲಿ ಹೆಚ್ಚು ಹಣ ಬರುತ್ತದೆ ಅದನ್ನೆಲ್ಲಾ ನೋಡಿಕೊಂಡು, ಕಟ್ಟುನಿಟ್ಟಿನ ಕ್ರಮ ತೆಗೆದುಕೊಳ್ಳುತ್ತೇವೆ. ಎಸ್‌ಓಪಿ ರಚಿಸಿ, ಡಿಸಿ, ತಹಶೀಲ್ದಾರ್ ಅವರು ಪ್ರಗತಿ ಪರಿಶೀಲನೆ ಮಾಡಿ ಸರ್ಕಾರಕ್ಕೆ ವರದಿ ಸಲ್ಲಿಸುತ್ತಾರೆ ಎಂದು ವಿವರಿಸಿದರು.

ಕ್ರೀಡೆಗೆ ನಮ್ಮ ಸರ್ಕಾರ ಹೆಚ್ಚು ಆದ್ಯತೆ ಕೊಡುತ್ತದೆ. ಈಗಾಗಲೇ ಕ್ರೀಡಾಪುಟಗಳಿಗೆ ಗೃಹ ಇಲಾಖೆಯಲ್ಲಿ ಶೇ.3ರಷ್ಟು ಮೀಸಲಾತಿ ಅನುಷ್ಠಾನಗೊಂಡಿದೆ. ಇನ್ನುಳಿದಂತೆ ಎಲ್ಲ ಇಲಾಖೆಗಳಲ್ಲಿ 72 ಸಾವಿರ ಹುದ್ದೆಗಳ ನೇಮಕಾತಿಯಲ್ಲೂ ಶೇ.2ರಷ್ಟು ಕ್ರೀಡಾಪಟುಗಳಿಗೆ ಮೀಸಲಾತಿ ನೀಡಲಾಗುವುದು ಎಂದು ಸ್ಪಷ್ಟಪಡಿಸಿದರು.

ಬರದ ತಾಲೂಕು, ಜಿಲ್ಲೆ ಅಂತಾ ಘೋಷಣೆ ಮಾಡಲು ಮಾನದಂಡಗಳಿವೆ. ಸುಮ್ಮನೇ ಇಂತ ತಾಲೂಕು ಬರಪೀಡಿತ ಅಂತಾ ಘೋಷಿಸಲು ಆಗಲ್ಲ. ಅದಕ್ಕೆ ಕೇಂದ್ರ ಮತ್ತು ರಾಜ್ಯ ಸರ್ಕಾರ ಕೆಲ ನಿಯಮಗಳನ್ನು ಮಾಡಿದೆ. ಬೆಳೆ ಹಾನಿ, ನೀರಿನ ಮಟ್ಟ ಲೆಕ್ಕ ಹಾಕಿ ಇಂತ ತಾಲೂಕು, ಜಿಲ್ಲೆ ಬರಪೀಡಿತ ಅಂತಾ ಘೋಷಿಸಬೇಕಾಗುತ್ತದೆ. ಸದ್ಯಕ್ಕೆ ಮೋಡ ಬಿತ್ತನೆ ಕುರಿತು ಯಾವುದೇ ಚಿಂತನೆ ಸರ್ಕಾರದ ಮುಂದಿಲ್ಲ. ಮುಂದೆ ಪರಿಸ್ಥಿತಿ ನೋಡಿಕೊಂಡು ನಿರ್ಧರಿಸಲಾಗುವುದು ಎಂದರು.

4ನೇ ಪುಟ.....

ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯ ಕಲ್ಯಾಣ ಯೋಜನೆಗಳ ಮಾಹಿತಿ

ರಾಯಚೂರು ಜುಲೈ 01

ಕಾರ್ಮಿಕ ಇಲಾಖೆಯ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ ಯಶವಂತಪುರ ಬೆಂಗಳೂರು ವತಿಯಿಂದ ಕರ್ನಾಟಕ ರಾಜ್ಯದಲ್ಲಿ ಕಾರ್ಮಿಕರ ಕಲ್ಯಾಣವನ್ನು ಸಂವರ್ಧನಗೊಳಿಸುವುದಕ್ಕೆ ಹಣಕಾಸು ನೆರವು ಒದಗಿಸಲು ಮತ್ತು ಚಟುವಟಿಕೆಗಳನ್ನು ನಡೆಸುವುದಕ್ಕಾಗಿ ಒಂದು ನಿಧಿಯನ್ನು ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ ಅಧಿನಿಯಮ 1965ರ ಅಡಿಯಲ್ಲಿ ಸ್ಥಾಪಿಸಲಾಗಿದೆ.

ಮಂಡಳಿಗೆ ವಂತಿಕೆ ಪಾವತಿಸುವ ವಿವಿಧ ಕ್ಷೇತ್ರಗಳಾದ ಕಾರ್ಖಾನೆಗಳು, ಕಾರ್ಯ ಸಂಸ್ಥೆಗಳಲ್ಲಿ ದುಡಿಯುತ್ತಿರುವ ಸಂಘಟಿತ ವಲಯದ ಕಾರ್ಮಿಕರು ಮತ್ತು ಅವರ ಕುಟುಂಬದ ಅವಲಂಬಿತರ ಕ್ಷೇಮಾಭಿವೃದ್ಧಿಗಾಗಿ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ ಈ ಕೆಳಗಿನ ಕಾರ್ಮಿಕ ಕಲ್ಯಾಣ ಯೋಜನೆಗಳು ಜಾರಿಯಲ್ಲಿರುತ್ತವೆ.

ಕಲ್ಯಾಣ ಯೋಜನೆಯ ಸೌಲಭ್ಯ ಪಡೆಯಲು ಪ್ರತಿ ವರ್ಷ ಜನವರಿ 1ರಿಂದ ಜನವರಿ 15ನೇ ತಾರೀಖಿನೊಳಗೆ ಕಾರ್ಮಿಕರಿಂದ 50 ರೂ. ಹಾಗೂ ಮಾಲೀಕರು 100 ರೂ.ಗಳಂತೆ ಒಬ್ಬ ಕಾರ್ಮಿಕನಿಗೆ ಒಟ್ಟು 150 ರೂ.ಗಳಂತೆ ಕಾರ್ಮಿಕ ಕಲ್ಯಾಣ ನಿಧಿ ವಂತಿಕೆಯನ್ನು ಆನ್‌ಲೈನ್ ಮೂಲಕ ಪಾವತಿಸಿರಬೇಕು.

ವಂತಿಕೆ ಪಾವತಿ ಮಾಡುವ ಸಂಸ್ಥೆಗಳು ಹಾಗೂ ಕಾರ್ಖಾನೆಗಳು, ಕಾರ್ಯ ಸಂಸ್ಥೆಗಳು :/ /... ಇಲ್ಲಿ ನೊಂದಾಯಿಸಿ ಆನ್‌ಲೈನ್ ಮೂಲಕ ವಂತಿಕೆ ಪಾವತಿ ಮಾಡಬೇಕಾಗಿರುತ್ತದೆ.

ಶೈಕ್ಷಣಿಕ ಪ್ರೋತ್ಸಾಹ ಸಹಾಯಧನ ಪಡೆಯಲು ವಿದ್ಯಾರ್ಥಿಗಳು, ಶಿಕ್ಷಣ ಸಂಸ್ಥೆಗಳು, ಕಾರ್ಖಾನೆಗಳು, ಕಾರ್ಯಸಂಸ್ಥೆಗಳು ://... ಇಲ್ಲಿ ನೊಂದಾಯಿಸಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾಗಿರುತ್ತದೆ. ಶೈಕ್ಷಣಿಕ ಪ್ರೋತ್ಸಾಹ ಸಹಾಯಧನ ಕಲ್ಯಾಣ ಯೋಜನೆಗೆ ಕಾರ್ಮಿಕರ ಮಾಸಿಕ ವೇತನ 35,000ರೂ. ಮೀರಿರಬರದು.

ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಸಹಾಯಧನ: ಪ್ರೌಢ ಶಾಲೆ (8 ರಿಂದ 10ನೇ ತರಗತಿವರೆಗೆ) 6,000 ರೂ. ಪಿಯುಸಿ/ ಡಿಪ್ಲೊಮಾ/ಐಟಿಐ/ಟಿಸಿಹೆಚ್ ಶಿಕ್ಷಣಕ್ಕಾಗಿ 8000 ರೂ. ಪದವಿ ಶಿಕ್ಷಣಕ್ಕಾಗಿ 10.000 ರೂ. ಸ್ನಾತಕೋತ್ತರ ಶಿಕ್ಷಣಕ್ಕಾಗಿ 12,000 ರೂ. ಇಂಜಿನೀಯರಿಂಗ್, ವೈದ್ಯಕೀಯ ಶಿಕ್ಷಣಕ್ಕಾಗಿ 20.000 ರೂ.ಗಳ ಪ್ರೋತ್ಸಾಹ ಸಹಾಯಧನ ನೀಡಲಾಗುವುದು. (ಅರ್ಜಿ ಸಲ್ಲಿಸಲು ಸಾಮಾನ್ಯ ವರ್ಗದವಿದ್ಯಾರ್ಥಿಗಳು ಶೇ.50 ಹಾಗೂ ಪ.ಜಾತಿ, ಪ.ಪಂಗಡದ ವಿದ್ಯಾರ್ಥಿಗಳು ಶೇ.45ರಷ್ಟು ಅಂಕ ಪಡೆದು ತೇರ್ಗಡೆಯಾಗಿರಬೇಕು. ಒಂದು ಕುಟುಂಬದಲ್ಲಿ ಇಬ್ಬರು,ವಿದ್ಯಾರ್ಥಿಗಳಿಗೆ (ಮಕ್ಕಳಿಗೆ) ಮಾತ್ರ ಈ ಸೌಲಭ್ಯ ನೀಡಲಾಗುವುದು.

ಈ ಕೆಳಗಿನ ಕಲ್ಯಾಣ ಯೋಜನೆಗಳಿಗೆ ಕಾರ್ಮಿಕರ ಮಾಸಿಕ ಸಂಬಳದ ಮಿತಿಯಿರುವುದಿಲ್ಲ.ವಯೋಮಿತಿ 18-60 ವರ್ಷದೊಳಗೆ ಇರಬೇಕು.

ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಸಹಾಯಧನ: ಈ ಯೋಜನೆಯ ಸೌಲಭ್ಯ ಪಡೆಯಲು ಮೃತರ ಕುಟುಂಬದ ಅವಲಂಬಿತರು ಕಾರ್ಮಿಕರು ಮೃತಪಟ್ಟ 6 ತಿಂಗಳೊಳಗೆ ನಿಗಧಿತ ಅರ್ಜಿ ನಮೂನೆಯಲ್ಲಿ ಸಂಬದಪಟ್ಟ ಸಂಸ್ಥೆಗಳು ಹಾಗೂ ಕಾರ್ಖಾನೆಗಳು, ಕಾರ್ಯಸಂಸ್ಥೆಗಳ ಮುಖಾಂತರ ಸೂಕ್ತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಿದಲ್ಲಿ 20,000 ರೂ. ಸಹಾಯಧನ ನೀಡಲಾಗುವುದು.

ಮಹಿಳಾ ಕಾರ್ಮಿಕರಿಗೆ ಹೆರಿಗೆ ಭತ್ಯ ಸೌಲಭ್ಯ ಸಹಾಯಧನ: ಮಹಿಳ ಕಾರ್ಮಿಕರಿಗೆ ಮೊದಲ 2 ಮಕ್ಕಳಿಗೆ ಮಾತ್ರ ಹೆರಿಗೆ ಸೌಲಭ್ಯವನ್ನು ತಲಾ 10.000 ರೂ.ಗಳಂತೆ ಸಹಾಯ ಧನ ನೀಡಲಾಗುವುದು. ಮಗು ಜನಿಸಿದ 6 ತಿಂಗಳೊಳಗೆ ನಿಗದಿತ ಅರ್ಜಿ ನಮೋನೆಯಲ್ಲಿ ಸಂಬದಪಟ್ಟ ಸಂಸ್ಥೆಗಳ ಹಾಗೂ ಕಾರ್ಖಾನೆಗಳು, ಕಾರ್ಯಸಂಸ್ಥೆಗಳ ಮುಖಾಂತರ ಅರ್ಜಿ ಸಲ್ಲಿಸಬೇಕು.

4ನೇ ಪುಟ.....

ಫಿಟ್ನೆಸ್ ಶುಲ್ಕ ಹೆಚ್ಚಳ ಹಿಂಪಡೆಯಲು, ಸರಕು ವಾಹನಗಳಿಗೆ ವಿಎಲ್‌ಟಿಡಿ ಕಡ್ಡಾಯದಿಂದ ವಿನಾಯಿತಿ ನೀಡಲು ಆಗ್ರಹ



ರಾಯಚೂರು, ಜು. 1:

ಹಳೆಯ ಸರಕು ಸಾಗಾಣಿಕೆ ವಾಹನಗಳ ಫಿಟ್ನೆಸ್ ನವೀಕರಣ ಶುಲ್ಕವನ್ನು ಭಾರೀ ಪ್ರಮಾಣದಲ್ಲಿ ಹೆಚ್ಚಿಸಿರುವುದನ್ನು ತಕ್ಷಣ ಹಿಂಪಡೆಯಬೇಕು. ರಾಷ್ಟ್ರೀಯ ಪರವಾನಗಿ ಹೊಂದಿರುವ ಸರಕು ಸಾಗಾಣಿಕೆ ವಾಹನಗಳಿಗೆ ಹಾಗೂ ಕಡ್ಡಾಯ ಗೊಳಿಸಿರುವ ಆದೇಶದಿಂದ ವಿನಾಯಿತಿ ನೀಡಬೇಕು. ಜೊತೆಗೆ ನಿರಂತರ ಏರಿಕೆಯಾಗುತ್ತಿರುವ ಡೀಸೆಲ್ ಬೆಲೆಯನ್ನು ಇಳಿಸಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಲಾರಿ ಮಾಲೀಕರ ಸಂಘದ ಅಧ್ಯಕ್ಷ ಸೈಯದ್ ಹಸನ್ ಒತ್ತಾಯಿಸಿದರು.

ಈ ಕುರಿತು ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ಸಲ್ಲಿಸಿದ ಮನವಿಯಲ್ಲಿ ಅವರು, ಫಿಟ್ನೆಸ್ ನವೀಕರಣ ಶುಲ್ಕದ ಹೆಚ್ಚಳದಿಂದ ಸಣ್ಣ ಹಾಗೂ ಮಧ್ಯಮ ವರ್ಗದ ಲಾರಿ ಮಾಲೀಕರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದು, ವಾಹನಗಳನ್ನು ರಸ್ತೆಗಿಳಿಸುವುದೇ ಕಷ್ಟಕರವಾಗಿದೆ. ಇದರಿಂದ ಸಾರಿಗೆ ಉದ್ಯಮದ ಮೇಲೆ ಪ್ರತಿಕೂಲ ಪರಿಣಾಮ ಬೀಳುತ್ತಿದ್ದು, ಸಾವಿರಾರು ಕುಟುಂಬಗಳ ಜೀವನೋ ಪಾಯಕ್ಕೂ ಧಕ್ಕೆಯಾಗುವ ಆತಂಕ ಎದುರಾಗಿದೆ ಎಂದು ತಿಳಿಸಿದ್ದಾರೆ.

ಮಹಿಳೆಯರು ಹಾಗೂ ಮಕ್ಕಳ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಸಾರ್ವಜನಿಕ ಸೇವಾ

4ನೇ ಪುಟ.....

ಅಲ್ಪಸಂಖ್ಯಾತ ಸಮುದಾಯಗಳ ಹಿತರಕ್ಷಣೆ ನಮ್ಮ ಆದ್ಯತೆ

ಬಳ್ಳಾರಿ,ಜು.01–

ಅಲ್ಪಸಂಖ್ಯಾತರ ಹಕ್ಕುಗಳನ್ನು ಕಾಯ್ದಿರಿಸಲು ಮತ್ತು ಅವರ ಹಿತಾಸಕ್ತಿಗಳನ್ನು ಕಾಪಾಡಲು ಆಯೋಗವು ಬದ್ಧವಾಗಿದೆ. ಶಿಕ್ಷಣ, ಮಹಿಳಾ ಸಬಲೀಕರಣ, ಯುವ ಸಬಲೀಕರಣ ಮತ್ತು ಸಾಮಾಜಿಕ ಪಿಡುಗುಗಳ ನಿರ್ಮೂಲನೆಗಾಗಿ ಆಯೋಗದಲ್ಲಿ ವಿಶೇಷ ಉಪಸಮಿತಿಗಳನ್ನು ರಚಿಸಲಾಗಿದ್ದು, ಇವುಗಳು ರಾಜ್ಯಾದ್ಯಂತ ಅಧ್ಯಯನ ನಡೆಸಿ ಸರ್ಕಾರಕ್ಕೆ ಸೂಕ್ತ ಶಿಫಾರಸುಗಳನ್ನು ಸಲ್ಲಿಸಲಿವೆ ಎಂದು ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ಯು.ನಿಸಾರ್ ಅಹಮದ್ ಅವರು ಹೇಳಿದರು.

ನಗರದ ನೂತನ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಜಿಲ್ಲಾ ಮಟ್ಟದ ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

★ತ್ರಿಮಟ್ಟದ ಉಸ್ತುವಾರಿ ಸಮಿತಿಗಳು:★

ಸರ್ಕಾರವು ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಪ್ರಮುಖವಾಗಿ ಮೂರು ಹಂತದ ಸಮಿತಿಗಳನ್ನು ರಚಿಸಿದೆ. ರಾಜ್ಯ ಮಟ್ಟದ 15 ಅಂಶಗಳ ಕಾರ್ಯಕ್ರಮ ಸಮಿತಿ, ಜಿಲ್ಲಾ ಮಟ್ಟದ ಸಮಿತಿ, ಬೆನಿಫಿಷಿಯರಿ ಸ್ಕೀಮ್ಸ್ ಉಸ್ತುವಾರಿ ಸಮಿತಿ ಒಳಗೊಂಡಿದೆ. ಸರ್ಕಾರದ ವಿವಿಧ ಇಲಾಖೆಗಳಲ್ಲಿರುವ ವೈಯಕ್ತಿಕ ಫಲಾನುಭವಿ ಆಧಾರಿತ ಯೋಜನೆಗಳಲ್ಲಿ ಅಲ್ಪಸಂಖ್ಯಾತರಿಗೆ ಕಡ್ಡಾಯವಾಗಿ ಶೇಕಡಾ 15 ರಷ್ಟು ಮೀಸಲಾತಿ ನೀಡಬೇಕು ಎಂಬ ನಿಯಮವಿದೆ. ಇದರ ಮೇಲ್ವಿಚಾರಣೆಗೆ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರ ನೇತೃತ್ವದಲ್ಲಿ ಸಮಿತಿ ರಚಿಸಲಾಗಿದೆ. ಸರ್ಕಾರದ ವಿವಿಧ ಇಲಾಖೆಗಳ ಆಯುಕ್ತರು, ನಿರ್ದೇಶಕರು ಹಾಗೂ ಜಂಟಿ ಕಾರ್ಯದರ್ಶಿಗಳು ಇದರ ಸದಸ್ಯರಾಗಿದ್ದಾರೆ ಎಂದು ವಿವರಿಸಿದರು. ಅಲ್ಪಸಂಖ್ಯಾತ ಸಮುದಾಯದ ಜನರಿಗೆ ಯಾವುದೇ ಇಲಾಖೆ ಅಥವಾ ಅಧಿಕಾರಿಗಳಿಂದ ಅನ್ಯಾಯವಾಗುತ್ತಿದ್ದರೆ, ಅಥವಾ ನ್ಯಾಯಸಮ್ಮತವಾದ ಕೆಲಸಗಳು ಆಗದಿದ್ದರೆ ನೇರವಾಗಿ ಆಯೋಗಕ್ಕೆ ದೂರು ನೀಡಬಹುದು. ಆಯೋಗವು ಸಿವಿಲ್ ನ್ಯಾಯಾಲಯದ ಅಧಿಕಾರವನ್ನು ಹೊಂದಿದೆ. ಸ್ವೀಕೃತವಾದ ದೂರುಗಳ ಆಧಾರದ ಮೇಲೆ ಸಂಬಧಪಟ್ಟ ಅಧಿಕಾರಿಗಳಿಗೆ ಸಮನ್ಸ್ ಜಾರಿ ಮಾಡುವ ಅಧಿಕಾರ ಆಯೋಗಕ್ಕಿದೆ. ಪ್ರತಿ ತಿಂಗಳು ಆಯೋಗದ ಕಚೇರಿಯಲ್ಲಿ ಇಂತಹ ಪ್ರಕರಣಗಳ ವಿಚಾರಣೆ ನಡೆಸಿ ಇತ್ಯರ್ಥಪಡಿಸಲಾಗುತ್ತಿದೆ ಎಂದರು.

★ಬಳ್ಳಾರಿ ಜಿಲ್ಲೆಯಲ್ಲಿ ಜಾಗೃತಿಯ ಕೊರತೆ:★

ಬಳ್ಳಾರಿ ಜಿಲ್ಲೆಯಲ್ಲಿ ಕಳೆದ ಒಂದೂವರೆ ವರ್ಷದಿಂದ ಆಯೋಗಕ್ಕೆ ಯಾವುದೇ ದೂರುಗಳು ಸಲ್ಲಿಕೆಯಾಗಿಲ್ಲದಿರುವ ಬಗ್ಗೆ ಅಧ್ಯಕ್ಷರು ಅಚ್ಚರಿ ವ್ಯಕ್ತಪಡಿಸಿದರು. ಜಿಲ್ಲೆಯಲ್ಲಿ ಯಾವುದೇ ಸಮಸ್ಯೆಗಳಿಲ್ಲ ಎಂದಲ್ಲ, ಬದಲಿಗೆ ಆಯೋಗದ ಅಧಿಕಾರ ಮತ್ತು ಕಾರ್ಯವೈಖರಿಯ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿಯ ಕೊರತೆಯಿರುವುದೇ ಇದಕ್ಕೆ ಕಾರಣ ಇರಬಹುದು ಎಂದು ಅವರು ಅಭಿಪ್ರಾಯಪಟ್ಟರು.



ಜಿಲ್ಲಾ ಪ್ರವಾಸದ ಸಂದರ್ಭದಲ್ಲಿ ಅಧಿಕಾರಿಗಳು ಶಿಕ್ಷಣ, ವಸತಿ, ಆರೋಗ್ಯ ಸೇರಿದಂತೆ ಎಲ್ಲಾ ರಂಗಗಳಲ್ಲಿ ಅಲ್ಪಸಂಖ್ಯಾತರಿಗೆ ಸಿಗಬೇಕಾದ ಸೌಲಭ್ಯಗಳ ಪ್ರಗತಿಯನ್ನು ಪರಿಶೀಲಿಸಿ, ನ್ಯೂನತೆಗಳಿದ್ದರೆ ನೇರವಾಗಿ ಮುಖ್ಯಮಂತ್ರಿ ಹಾಗೂ ಮುಖ್ಯ ಕಾರ್ಯದರ್ಶಿಗಳಿಗೆ ವರದಿ ಸಲ್ಲಿಸಲಾಗುವುದು ಎಂದು ಎಚ್ಚರಿಸಿದರು.

ಬಳ್ಳಾರಿ ಜಿಲ್ಲೆಯಲ್ಲಿ ಅಲ್ಪಸಂಖ್ಯಾತ ಸಮುದಾಯದ ಜನಸಂಖ್ಯೆ ಹೆಚ್ಚಿರುವ ಪ್ರದೇಶಗಳ ಮ್ಯಾಪಿಂಗ್ ಮತ್ತು ಜನಗಣತಿ ಸಮೀಕ್ಷೆ ನಡೆಸಬೇಕು. ಯಾವುದೇ ಒಂದು ಕುಟುಂಬವೂ ಈ ಸಮೀಕ್ಷೆಯಿಂದ ಹೊರಗುಳಿಯದಂತೆ ಕ್ರಮ ವಹಿಸಬೇಕು. ಮುಂದಿನ ದಿನಗಳಲ್ಲಿ ಶಿಕ್ಷಣ ಇಲಾಖೆಯೊಂದಿಗೆ ಸಮನ್ವಯ ಸಾಧಿಸಿ, ಜಿಲ್ಲೆಯಲ್ಲಿರುವ 3 ರಿಂದ 6 ವರ್ಷದೊಳಗಿನ ಮಕ್ಕಳ ನಿಖರ ಮಾಹಿತಿ ಹಾಗೂ ಕಳೆದ ವರ್ಷ 6 ವರ್ಷ ಪೂರೈಸಿರುವ ಮಕ್ಕಳ ವಿವರಗಳನ್ನು ಪಡೆದುಕೊಳ್ಳಬೇಕು. ಶಾಲೆ ಮತ್ತು ಅಂಗನವಾಡಿಗಳಿದ ಹೊರಗುಳಿದಿರುವ ಮಕ್ಕಳನ್ನು ಪತ್ತೆ ಹಚ್ಚಿ, ಅವರನ್ನು ಮರಳಿ ಶಿಕ್ಷಣದ ಮುಖ್ಯವಾಹಿನಿಗೆ ತರಲು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಕ್ಷಣ ಇಲಾಖೆಗಳ ಅಧಿಕಾರಿಗಳಿಗೆ ಸೂಚಿಸಿದರು.

ಮುಸ್ಲಿಂ ಮತ್ತು ಇತರೆ ಮೈನಾರಿಟಿ ಸಮುದಾಯಗಳಲ್ಲಿ ಅನಕ್ಷರತೆಯ ಪ್ರಮಾಣವು ಹೆಚ್ಚಾಗುತ್ತಿದ್ದು, ಇದು ಸಮಾಜ ಮತ್ತು ದೇಶದ ಪ್ರಗತಿಗೆ ದೊಡ್ಡ ಹಿನ್ನಡೆಯಾಗಿದೆ. 2011ರ ಜನಗಣತಿಯ ಪ್ರಕಾರ, ಮೈನಾರಿಟಿಗಳಲ್ಲಿ, ಅದರಲ್ಲೂ ಮುಖ್ಯವಾಗಿ ಮುಸ್ಲಿಂ ಸಮುದಾಯದಲ್ಲಿ ಶೇಕಡಾ 43.76 ರಷ್ಟು ಜನರು ಅನಕ್ಷರಸ್ಥರಾಗಿದ್ದಾರೆ. ಸಹಿ ಮಾಡಲೂ ಬಾರದ ಇಂತಹ ವ್ಯಕ್ತಿಗಳಿಂದ ಸಮಾಜಕ್ಕೆ ಅಥವಾ ದೇಶಕ್ಕೆ ಯಾವುದೇ ಕೊಡುಗೆ ನೀಡಲು ಸಾಧ್ಯವಾಗುತ್ತಿಲ್ಲ. ಶಿಕ್ಷಣ ಹಕ್ಕು ಕಾಯ್ದೆ'ಯ ಪ್ರಕಾರ 6 ರಿಂದ 14 ವರ್ಷದ ಮಕ್ಕಳಿಗೆ ಉಚಿತ ಮತ್ತು ಕಡ್ಡಾಯ ಗುಣಮಟ್ಟದ ಶಿಕ್ಷಣ ನೀಡುವುದು ಸರ್ಕಾರದ ಜವಾಬ್ದಾರಿಯಾಗಿದೆ. ಪೋಷಕರು ತಮ್ಮ ಮಕ್ಕಳನ್ನು ಶಾಲೆಗೆ ಕಳುಹಿಸದಿದ್ದರೆ ಅಥವಾ ಬಾಲಕಾರ್ಮಿಕ ಪದ್ಧತಿಗೆ ತಳ್ಳಿದರೆ ಅವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಿ ಜೈಲಿಗೆ ಕಳುಹಿಸುವ ಕಾನೂನಿದೆ. ಹಾಗಾಗಿ ಅಧಿಕಾರಿಗಳು ಈ ಕುರಿತು ಅವರಲ್ಲಿ ಅರಿವು ಮೂಡಿಸಬೇಕು ಎಂದರು.

★ಅಲ್ಪಸಖ್ಯಾತ ಕೊಳಗೇರಿಗಳ ಮ್ಯಾಪಿಂಗ್‌ಗೆ ಸೂಚನೆ:★

ಜಿಲ್ಲೆಯಲ್ಲಿ ಅಲ್ಪಸಂಖ್ಯಾತರು ಹಾಗೂ ಹಿಂದುಳಿದ ವರ್ಗದವರು ವಾಸಿಸುವ ಕೊಳಗೇರಿ (ಸ್ಲಂ) ಪ್ರದೇಶಗಳಲ್ಲಿ ಮೂಲಭೂತ ಆರೋಗ್ಯ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಅಲ್ಪಸಂಖ್ಯಾತ ಕೊಳಗೇರಿಗಳನ್ನು ಗುರುತಿಸಿ, ಅಲ್ಲಿನ ಜನಸಂಖ್ಯೆಗೆ ಅನುಗುಣವಾಗಿ ನಮ್ಮ ಕ್ಲಿನಿಕ್, ಪ್ರಾಥಮಿಕ ಆರೋಗ್ಯ ಕೇಂದ್ರ, ಅಥವಾ ಹೆರಿಗೆ ಆಸ್ಪತ್ರೆಗಳನ್ನು ಸ್ಥಾಪಿಸಲು ವರದಿ ಸಿದ್ಧಪಡಿಸುವಂತೆ ಆರೋಗ್ಯ ಮತ್ತು ಕೊಳಗೇರಿ ಅಭಿವೃದ್ಧಿ ಮಂಡಳಿಯ ಅಧಿಕಾರಿಗಳಿಗೆ ಸೂಚಿಸಿದರು. ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಗೆ ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದಲು ಬ್ಯಾಂಕ್ ಲೋನ್ ಗಳನ್ನು ನೀಡಬೇಕು. ಬೀದಿ ಬದಿ ವ್ಯಾಪಾರಸ್ಥರಿಗೆ ನೆರವು ನೀಡಬೇಕು. ಉದ್ಯೋಗಾಧಾರಿತ ಕೌಶಲ್ಯ ತರಬೇತಿ ನೀಡಬೇಕು ಎಂದು ಸಂಬಧಿಸಿದ ಅಧಿಕಾರಿಗಳಿಗೆ ತಿಳಿಸಿದರು. ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸುಮನ್ ಡಿ.ಪೆನ್ನೇಕರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್, ಮಹಾನಗರ ಪಾಲಿಕೆಯ ಆಯುಕ್ತ ಪಿ.ಎಸ್.ಮಂಜುನಾಥ್, ಆಯೋಗದ ಅಧ್ಯಕ್ಷರ ವಿಶೇಷ ಕರ್ತವ್ಯಾಧಿಕಾರಿ ಮುಜಿಬುಲ್ಲಾ ಜಫಾರಿ, ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಅಧಿಕಾರಿ ರಾಜು ಸೇರಿದಂತೆ ಜಿಲ್ಲಾ ಮಟ್ಟದ ಸಮಿತಿಯ ಸದಸ್ಯರು, ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

ಇದಕ್ಕೂ ಮುನ್ನ ಅಧ್ಯಕ್ಷರು, ಜಿಲ್ಲಾ ಪಂಚಾಯತ್ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಅಲ್ಪಸಂಖ್ಯಾತರ ಕುಂದು ಕೊರತೆಗಳ ವಿಚಾರಣಾ ಸಭೆ ನಡೆಸಿದರು.



ವಿಜಯನಗರ ಮಾಜಿ ಸಚಿವ ಆನಂದ್‌ಸಿಂಗ್ ಕುಟುಂಬಕ್ಕೆ ಮತದಾರರ ಗಣತಿ ನಮೂನೆ ವಿತರಣೆ

ವಿಜಯನಗರ ,ಜು.01–

ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಅಭಿಯಾನದ ಅಂಗವಾಗಿ ಮಂಗಳವಾರ ಮಾಜಿ ಸಚಿವ ಆನಂದ್‌ಸಿಂಗ್ ಅವರ ಕುಟುಂಬದ ಸದಸ್ಯರಿಗೆ ಮತದಾರರ ಗಣತಿ ನಮೂನೆ ( ) ವಿತರಿಸಲಾಯಿತು.

ಈ ಸಂದರ್ಭದಲ್ಲಿ ಹೊಸಪೇಟೆ ತಹಶೀಲ್ದಾರರಾದ ಶೃತಿ ಮಳ್ಳಪ್ಪಗೌಡ್ರು, ಚುನಾವಣಾ ಶಿರಸ್ತೇದಾರ್ ನಾಗರಾಜ ಹಾಗೂ ಸಂಬಂಧಿತ ಬೂತ್ ಮಟ್ಟದ ಅಧಿಕಾರಿಗಳು (ಬಿ.ಎಲ್.ಒ.) ಆನಂದ್‌ಸಿಂಗ್ ಅವರ ನಿವಾಸಕ್ಕೆ ಭೇಟಿ ನೀಡಿ ಕುಟುಂಬದ ಸದಸ್ಯರಿಗೆ ನಮೂನೆಗಳನ್ನು ಹಸ್ತಾಂತರಿಸಿದರು.

ಮತದಾರರ ಪಟ್ಟಿಯನ್ನು ಹೆಚ್ಚು ನಿಖರ, ಪಾರದರ್ಶಕ ಹಾಗೂ ಸಮಗ್ರಗೊಳಿಸುವ ಉದ್ದೇಶದಿಂದ ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಎಸ್‌ಐಆರ್ ಅಭಿಯಾನವನ್ನು ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಜಾರಿಗೊಳಿಸಲಾಗುತ್ತಿದೆ. ಅರ್ಹ ಮತದಾರರು ನೀಡಲಾದ ನಮೂನೆಗಳನ್ನು ಸರಿಯಾಗಿ ಭರ್ತಿ ಮಾಡಿ ಅಗತ್ಯ ದಾಖಲಾತಿಗಳೊಂದಿಗೆ ನಿಗದಿತ ಅವಧಿಯೊಳಗೆ ಸಂಬಂಧಿತ ಬಿ.ಎಲ್.ಒ.ಗಳಿಗೆ ಸಲ್ಲಿಸುವಂತೆ ಅಧಿಕಾರಿಗಳು ಮನವಿ ಮಾಡಿದರು.

ಜಿಲ್ಲಾಡಳಿತ ಹಾಗೂ ಚುನಾವಣಾ ಇಲಾಖೆ ವತಿಯಿಂದ ಮತದಾರರ ಪಟ್ಟಿಯ ಪರಿಷ್ಕರಣೆ ಕಾರ್ಯವನ್ನು ಮನೆ-ಮನೆಗೆ ತೆರಳಿ ನಡೆಸಲಾಗುತ್ತಿದ್ದು, ಪ್ರತಿಯೊಬ್ಬ ಅರ್ಹ ನಾಗರಿಕರು ಈ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಮತದಾರರ ಪಟ್ಟಿಯನ್ನು ಸಮರ್ಪಕವಾಗಿ ಪರಿಷ್ಕರಿಸಿಕೊಳ್ಳುವಂತೆ ಅಧಿಕಾರಿಗಳು ಕರೆ ನೀಡಿದರು.



ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ಯು.ನಿಸಾರ್ ಅಹಮದ್ ಶಾಲೆ ಭೇಟಿ; ಸಮಸ್ಯೆಗಳ ಪರಿಶೀಲನೆ

ಬಳ್ಳಾರಿ,ಜು01–

ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರಾದ ಯು. ನಿಸಾರ್ ಅಹಮದ್ ಅವರು ಮಂಗಳವಾರ ನಗರದ ಎಪಿಎಂಸಿ ಈದ್ಗಾ ಸಮೀಪದ ಸರ್ಕಾರಿ ಹಿರಿಯ ಉರ್ದು ಪ್ರೌಢಶಾಲೆ ಹಾಗೂ ಕೌಲ್ ಬಜಾರ್ ತರಬೇತಿ ಶಾಲೆಗೆ ಭೇಟಿ ನೀಡಿ ಶಾಲಾ ಕಟ್ಟಡ ಹಾಗೂ ಮೂಲಸೌಕರ್ಯಗಳನ್ನು ಪರಿಶೀಲಿಸಿದರು. ಭೇಟಿ ವೇಳೆ ಶಾಲೆಯ ಶಿಕ್ಷಕರು ಮತ್ತು ಸಿಬ್ಬಂದಿಯಿದ ಶಾಲೆಯಲ್ಲಿರುವ ವಿವಿಧ ಸಮಸ್ಯೆಗಳು, ಮೂಲಸೌಕರ್ಯದ ಕೊರತೆ ಹಾಗೂ ಅಗತ್ಯ ಸೌಲಭ್ಯಗಳ ಕುರಿತು ಮಾಹಿತಿ ಪಡೆದು ಆಲಿಸಿದರು.

ಶಾಲೆಯ ತರಗತಿ ಕೊಠಡಿಗಳು, ಕುಡಿಯುವ ನೀರಿನ ವ್ಯವಸ್ಥೆ, ಶೌಚಾಲಯಗಳು ಮತ್ತು ಗ್ರಂಥಾಲಯವನ್ನು ಖುದ್ದಾಗಿ ವೀಕ್ಷಿಸಿದ ಅಧ್ಯಕ್ಷರು, ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವಲ್ಲಿ ಯಾವುದೇ ರಾಜಿ ಮಾಡಿಕೊಳ್ಳಬಾರದು ಎಂದು ಶಿಕ್ಷಕರಿಗೆ ಸೂಚಿಸಿದರು.

ಕಟ್ಟಡದ ಸ್ಥಿತಿಗತಿ, ತರಗತಿ ಕೊಠಡಿಗಳು ಹಾಗೂ ಶಾಲಾ ಪರಿಸರವನ್ನು ಪರಿಶೀಲಿಸಿದ ಅವರು, ವಿದ್ಯಾರ್ಥಿಗಳಿಗೆ ಉತ್ತಮ ಶೈಕ್ಷಣಿಕ ವಾತಾವರಣ ಕಲ್ಪಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳುವ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಅಲ್ಪಸಂಖ್ಯಾತರ ಸಮುದಾಯದ ರಾಜ್ಯಾಧ್ಯಕ್ಷ ದಾದಾ ಭಾಯ್, ಜಿಲ್ಲಾಧ್ಯಕ್ಷ ಡಿ.ಅಯಾಜ್, ಬುಡಾ ಮಾಜಿ ಅಧ್ಯಕ್ಷ ಮೋಹಿನ್ ಖಾನ್, ಕ್ರಿಶ್ಚಿಯನ್ ಸಮುದಾಯದ ಮುಖ್ಯಸ್ಥ ಜಾಷ್ವಾ, ಮುಖಂಡ ಕಣೇಕಲ್ ಮಾಬುಸಾಬ್, ಆಯೋಗದ ಅಧ್ಯಕ್ಷರ ವಿಶೇಷ ಕರ್ತವ್ಯಾಧಿಕಾರಿ ಮುಜಿಬುಲ್ಲಾ ಜಫಾರಿ, ಜಿಲ್ಲಾ ಅಲ್ಪ ಸಂಖ್ಯಾತರ ಕಲ್ಯಾಣ ಅಧಿಕಾರಿ ರಾಜು ಸೇರಿದಂತೆ ಶಾಲೆಯ ಮುಖ್ಯೋಪಾಧ್ಯಾಯರು ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ದ್ವೈಮಾಸಿಕ ಸಭೆ

ಇಲಾಖಾವಾರು ಕಾನೂನು ಅರಿವು ನೆರವು ಕಾರ್ಯಕ್ರಮ ಆಯೋಜಿಸಿ: ನ್ಯಾ. ವೇದಮೂರ್ತಿ ಬಿ.ಎಸ್.

ಕೊಪ್ಪಳ,ಜು.01–

ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಮುತುವರ್ಜಿ ವಹಿಸಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಹಯೋಗದಲ್ಲಿ ತಮ್ಮ ಇಲಾಖಾವಾರು ಕಾನೂನು ಅರಿವು ನೆರವು ಕಾರ್ಯಕ್ರಮಗಳನ್ನು ಅಚ್ಚುಕಟ್ಟಾಗಿ ಆಯೋಜಿಸಬೇಕು ಎಂದು ಗೌರವಾನ್ವಿತ ಕೊಪ್ಪಳ ಜಿಲ್ಲೆಯ ಗಂಗಾವತಿ ಪೀಠದ 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ವೇದಮೂರ್ತಿ ಬಿ.ಎಸ್. ಅವರು ಸೂಚನೆ ನೀಡಿದರು.

ಜಿಲ್ಲಾ ನ್ಯಾಯಾಲಯದ ಆವರಣದಲ್ಲಿರುವ ಪೋಕ್ಸೋ ನ್ಯಾಯಾಲಯದ ಸಭಾಂಗಣದಲ್ಲಿ ಸೋಮವಾರ (ಜೂ. 29ರಂದು) ಹಮ್ಮಿಕೊಳ್ಳಲಾಗಿದ್ದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ದ್ವೈಮಾಸಿಕ ಸಭೆಯಲ್ಲಿ ವರ್ಚುವಲ್ ವೇದಿಕೆ ಮೂಲಕ ಭಾಗವಹಿಸಿ ಅವರು ಮಾತನಾಡಿದರು.

ಜುಲೈ 11 ರಂದು ನಡೆಯುವ ರಾಷ್ಟ್ರೀಯ ಲೋಕ್ ಅದಾಲತ್ ಮತ್ತು ಆಗಸ್ಟ್ ಮಾಹೆಯಲ್ಲಿ ಜರುಗುವ 'ಸಮಾಧಾನ ಸಮಾರೋಹ' ವಿಶೇಷ ಲೋಕ್ ಅದಾಲತ್ ಹಾಗೂ ಈ ಎರಡು ತಿಂಗಳಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ನಡೆಯುವ ಎಲ್ಲಾ ಕಾರ್ಯಕ್ರಮಗಳ ಯಶಸ್ವಿಗೆ ಸರ್ಕಾರದ ಸಹಕಾರ ಅತ್ಯವಶ್ಯಕವಾಗಿದ್ದು, ಈ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಎಲ್ಲಾ ಇಲಾಖೆಗಳ ಅಧಿಕಾರಿಗಳು ಪರಸ್ಪರ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಬೇಕು ಎಂದರು.

ಜುಲೈ 30 ರಂದು ನಡೆಯುವ ''ಮಾನವ ಕಳ್ಳಸಾಗಣೆ ವಿರೋಧಿ ದಿನ'' ಆಚರಣೆಯನ್ನು ಡಿ.ಎಲ್.ಎಸ್.ಎ ಸಹಯೋಗದಲ್ಲಿ ಹಮ್ಮಿಕೊಂಡು ಸೂಕ್ತ ಕಾನೂನು ಅರಿವು ಮೂಡಿಸಬೇಕು. ಲೋಕ ಅದಾಲತ್‌ಗಳು ಮತ್ತು ಮಧ್ಯಸ್ಥಿಕೆಯ ಬಗ್ಗೆ ಮಧ್ಯವರ್ತಿಗಳಿಗೆ ಪುನರ್ ಮನನ, ಓರಿಯಂಟೇಶನ್ ಕೋರ್ಸ್ ಆಯೋಜಿಸಿ, ಜಾಗೃತಿ ಮೂಡಿಸಲು ಸೂಕ್ತ ಕ್ರಮ ಕೈಗೊಳ್ಳಿ. ''ಶಾಲೆಗೆ ಹಿಂತಿರುಗಿ'' ಎಂಬ ಧ್ಯೇಯದಡಿಯಲ್ಲಿ ಶಾಲೆ ಬಿಟ್ಟ ಮಕ್ಕಳ ಬಗ್ಗೆ ಮನೆ ಮನೆಗೆ ಅಭಿಯಾನ ನಡೆಸಬೇಕು.

ಮಾದಕ ವಸ್ತುಗಳ ಬಳಕೆಯಿಂದ ಆರೋಗ್ಯದ ಮೇಲಾಗುವ ಪರಿಣಾಮ



ಮತ್ತು ಡ್ರಗ್ಸ್ ನಿರ್ಮೂಲನಾ ಕಾಯ್ದೆಯ ಬಗ್ಗೆ ಎಲ್ಲಾ ಶಾಲೆಗಳು ಮತ್ತು ಕಾಲೇಜುಗಳಲ್ಲಿ ಅರಿವು ಮೂಡಿಸಬೇಕು. ಇದಲ್ಲದೇ ವಿಶೇಷವಾಗಿ ಪೋಕ್ಸೋ ಕಾಯ್ದೆ, ಜೆಜೆ ಕಾಯ್ದೆ ಕುರಿತು ಸಹ ಕಾನೂನು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕೆಂದು ಸಂಬಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಗೌರವಾನ್ವಿತ ತ್ವರಿತ ವಿಲೇವಾರಿ (ಪೋಕ್ಸೋ) ನ್ಯಾಯಾಲಯದ ಪ್ರಭಾರಿ ನ್ಯಾಯಾಧೀಶರು ಆಗಿರುವ ಕೊಪ್ಪಳ ಸಿಜೆಎಂ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಮಲ್ಕಾರಿ ರಾಮಪ್ಪ ಒಡಿಯರ್ ಅವರು ಮಾತನಾಡಿ, ವಿಪತ್ತು ಸಂತ್ರಸ್ತರಿಗೆ ಕಾನೂನು ಸೇವೆಗಳ (ನಾಲ್ಸಾ) ಜಾಗೃತಿ ಅನುಷ್ಠಾನವನ್ನು ಆಯೋಜಿಸುವ ಮೂಲಕ ಗ್ರಾಮೀಣ ಪ್ರದೇಶಗಳಲ್ಲಿ ಬೃಹತ್ ಕಾನೂನು ಸೇವಾ ಶಿಬಿರಗಳನ್ನು ಹಮ್ಮಿಕೊಳ್ಳಿ. ಮೂಲಭೂತ ಹಕ್ಕುಗಳು ಮತ್ತು ಕರ್ತವ್ಯಗಳ ಕುರಿತು ಕಾನೂನು ಸಾಕ್ಷರತಾ ಕಾರ್ಯಕ್ರಮಗಳನ್ನು ಆಯೋಜಿಸಬೇಕು. ಮಕ್ಕಳ ಕಲ್ಯಾಣ ಪೊಲೀಸ್ ಅಧಿಕಾರಿಗಳು ಮತ್ತು ವಿಶೇಷ ಬಾಲಾಪರಾಧಿ ಪೊಲೀಸ್ ಘಟಕಕ್ಕೆ ಸಂವೇದನಾಶೀಲತಾ ಕಾರ್ಯಕ್ರಮಗಳನ್ನು ಸಹ ಹಮ್ಮಿಕೊಳ್ಳಬೇಕೆಂದು ಹೇಳಿದರು.

ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ಎಸ್. ದರಗದ ಅವರು ಮಾತನಾಡಿ, ಸರ್ಕಾರದ ಪ್ರತಿಯೊಂದು ಯೋಜನೆಗಳ ಬಗ್ಗೆ ನಿಖರವಾದ ಮಾಹಿತಿಯನ್ನು ತಲುಪಿಸಿ, ಜನರಿಗೆ ಅನುಕೂಲತೆ ಕಲ್ಪಿಸಬೇಕು ಎಂಬುದು ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ಮುಖ್ಯ ಉದ್ದೇಶವಾಗಿದ್ದು, ಈ ಹಿನ್ನೆಲೆಯಲ್ಲಿ ನಾಲ್ಸಾ ಯೋಜನೆಗಳಾದ ಅಸಂಘಟಿತ ವಲಯದ ಕಾರ್ಮಿಕರಿಗೆ ಕಾನೂನು ಸೇವೆಗಳು, ಬಡತನ ನಿರ್ಮೂಲನಾ ಯೋಜನೆಗಳ ಪರಿಣಾಮಕಾರಿ ಅನುಷ್ಠಾನ ಯೋಜನೆ, ಮಾನಸಿಕ ಅಸ್ವಸ್ಥರು ಮತ್ತು ಬೌದ್ಧಿಕ ವಿಕಲಚೇತನರಿಗೆ ಕಾನೂನು ಸೇವೆಗಳು, ಮಕ್ಕಳ ಹಕ್ಕುಗಳು, ಮಕ್ಕಳ ಸ್ನೇಹಿ ಕಾನೂನು ನೆರವು ಸೇವೆಗಳು, ಹಿರಿಯ ನಾಗರಿಕರಿಗೆ ಕಾನೂನು ಸೇವೆಗಳು, ಆಸಿಡ್ ದಾಳಿಯ ಸಂತ್ರಸ್ತರಿಗೆ ಕಾನೂನು ಸೇವೆಗಳು, ಮಾದಕ ವಸ್ತು ದುರುಪಯೋಗದ ಬಲಿಪಶುಗಳಿಗೆ ಕಾನೂನು ಸೇವೆಗಳು ಮತ್ತು ಮಾದಕ ವಸ್ತು ಭೀತಿಯ ನಿರ್ಮೂಲನೆ ಯೋಜನೆ, ಬುಡಕಟ್ಟು ಹಕ್ಕುಗಳ ರಕ್ಷಣೆ ಮತ್ತು ಜಾರಿ ಯೋಜನೆ, ಕಾನೂನು ಸೇವೆಗಳ ಪ್ರಾಧಿಕಾರಗಳ ಮೂಲಕ ವಿಪತ್ತು ಸಂತ್ರಸ್ತರಿಗೆ ಕಾನೂನು ಸೇವೆಗಳು, ಅಂಗವಿಕಲ ಮಕ್ಕಳಿಗಾಗಿ ಕಾನೂನು ಸೇವೆಗಳ ಯೋಜನೆ, ಬಾಲ್ಯ ವಿವಾಹ ನಿರ್ಮೂಲನೆ ಕಡೆಗೆ ಪ್ರಮಾಣಿತ ಕಾರ್ಯಾಚರಣಾ ವಿಧಾನ, ಸಂವಾದ್ ಕಾರ್ಯಕ್ರಮದಡಿ ದುರ್ಬಲ ಆದಿವಾಸಿಗಳು ಮತ್ತು ಅಧಿಸೂಚಿತ, ಅಲೆಮಾರಿ ಬುಡಕಟ್ಟು ಜನಾಂಗದವರಿಗೆ ನ್ಯಾಯದ ಪ್ರವೇಶವನ್ನು ಬಲಪಡಿಸುವ ಯೋಜನೆ, ಹೀಗೆ ವಿವಿಧ ಯೋಜನೆಗಳು ಜಾರಿಯಲ್ಲಿವೆ. ನಾಲ್ಸಾ ದ ಎಲ್ಲಾ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಿ, ಕಾನೂನು ಅರಿವು ನೆರವು ಕಾರ್ಯಕ್ರಮಗಳನ್ನು ನಡೆಸಲು ನಮ್ಮೊಂದಿಗೆ ಸಹಕರಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಕೊಪ್ಪಳ ಸಹಾಯಕ ಆಯುಕ್ತರಾದ ಮಹೆಬೂಬ್ ಜೀಲಾನಿ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿಗಳಾದ ಟಿ.ಕೃಷ್ಣಮೂರ್ತಿ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಆರ್.ಹೇಮಂತ ಕುಮಾರ್, ಕೊಪ್ಪಳ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ಸಿಂಧು ಅಂಗಡಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ವಕೀಲರು, ನ್ಯಾಯಾಲಯದ ಇತರೆ ಸಿಬ್ಬಂದಿ ಉಪಸ್ಥಿತರಿದ್ದರು.

ಆಳಂದದಲ್ಲಿ ರಾಷ್ಟ್ರೀಯ ಪಲ್ಸ್ ಪೋಲಿಯೊ ಅಭಿಯಾನ ಯಶಸ್ವಿ



ಆಳಂದ,ಜು.01

ಮಕ್ಕಳನ್ನು ಜೀವಮಾನದ ಅಂಗವೈಕಲ್ಯದಿಂದ ರಕ್ಷಿಸುವ ಉದ್ದೇಶದಿಂದ ಆರೋಗ್ಯ ಇಲಾಖೆ ಹಮ್ಮಿಕೊಂಡಿದ್ದ ರಾಷ್ಟ್ರೀಯ ಪಲ್ಸ್ ಪೋಲಿಯೊ ಲಸಿಕಾ ಅಭಿಯಾನವನ್ನು ಆಳಂದ ಪಟ್ಟಣದಲ್ಲಿ ಯಶಸ್ವಿಯಾಗಿ ನಡೆಸಲಾಯಿತು.

ಅಭಿಯಾನದ ಅಂಗವಾಗಿ 28 ವಿಶೇಷ ತಂಡಗಳನ್ನು ರಚಿಸಿ, ಪಟ್ಟಣದ ವಿವಿಧ ವಾರ್ಡ್‌ಗಳು, ಬಸ್ ನಿಲ್ದಾಣ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರ, ದರ್ಗಾ ಪ್ರದೇಶ ಸೇರಿದಂತೆ ಜನಸಂದಣಿ ಹೆಚ್ಚಿರುವ ಸ್ಥಳಗಳಲ್ಲಿ ವಿಶೇಷ ಲಸಿಕಾ ಕೇಂದ್ರಗಳನ್ನು ಸ್ಥಾಪಿಸಿ ಐದು ವರ್ಷದೊಳಗಿನ ಮಕ್ಕಳಿಗೆ ಎರಡು ಹನಿ ಪೋಲಿಯೊ ಲಸಿಕೆ ನೀಡಲಾಯಿತು.

ಸಾರ್ವಜನಿಕ ಆಸ್ಪತ್ರೆಯ ವೈದ್ಯಾಧಿಕಾರಿ ಡಾ. ಉಮಕಾಂತ್ ರಾಜಗಿರಿ ಮಕ್ಕಳಿಗೆ ಪೋಲಿಯೊ ಹನಿ ಹಾಕುವ ಮೂಲಕ ಅಭಿಯಾನಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಸಂಗೀತಾ ಪಾಟೀಲ, ಪೋಲಿಯೊ ಸಂಪೂರ್ಣ ನಿರ್ಮೂಲನೆಗೆ ಪ್ರತಿಯೊಂದು ಮಗುವಿಗೂ ನಿಗದಿತ ದಿನದಂದು ಕಡ್ಡಾಯವಾಗಿ ಎರಡು ಹನಿ ಪೋಲಿಯೊ ಲಸಿಕೆ ಹಾಕಿಸಬೇಕು. ಈ ಹಿಂದೆ ಲಸಿಕೆ ಪಡೆದಿದ್ದ ಮಕ್ಕಳಿಗೂ ಪ್ರತಿಯೊಂದು ಪಲ್ಸ್ ಪೋಲಿಯೊ ಅಭಿಯಾನದ ವೇಳೆ ಮತ್ತೆ ಲಸಿಕೆ ನೀಡುವುದು ರೋಗನಿರೋಧಕ ಶಕ್ತಿಯನ್ನು ಮತ್ತಷ್ಟು ಬಲಪಡಿಸುತ್ತದೆ. ಆದ್ದರಿಂದ ಯಾವುದೇ ಮಗು ಲಸಿಕೆಯಿಂದ ವಂಚಿತವಾಗದಂತೆ ಪೋಷಕರು ಜವಾಬ್ದಾರಿಯಿಂದ ಸಹಕರಿಸಬೇಕು ಎಂದು ಮನವಿ ಮಾಡಿದರು.

ಅಭಿಯಾನದಲ್ಲಿ ಆರೋಗ್ಯ ಇಲಾಖೆ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸ್ವಯಂ ಸೇವಕರು ಸಮನ್ವಯದಿಂದ ಕಾರ್ಯನಿರ್ವಹಿಸಿದರು. ಮನೆಗಳಲ್ಲಿ ಲಭ್ಯವಿರದ ಮಕ್ಕಳು ಹಾಗೂ ಪ್ರಯಾಣಿಕರ ಮಕ್ಕಳಿಗೂ ಲಸಿಕೆ ತಲುಪಿಸುವ ಉದ್ದೇಶದಿಂದ ಸಾರ್ವಜನಿಕ ಸ್ಥಳಗಳಲ್ಲಿ ವಿಶೇಷ ಲಸಿಕಾ ಕೇಂದ್ರಗಳನ್ನು ತೆರೆಯಲಾಗಿತ್ತು.

ಮಾದಕ ವಸ್ತುಗಳ ಹಾವಳಿ ತಡೆಗೆ ಯುವಕರು ಪೊಲೀಸರಿಗೆ ನೆರವಾಗಬೇಕು: ಪೊಲೀಸ್ ಆಯುಕ್ತ ಶರಣಪ್ಪ

ಕಲಬುರಗಿ,ಜು.01–

ಮಾದಕ ವಸ್ತುಗಳ ಅಕ್ರಮ ಸಾಗಾಟ ಮತ್ತು ಮಾರಾಟದಂತಹ ಕಾನೂನುಬಾಹಿರ ಚಟುವಟಿಕೆಗಳ ಬಗ್ಗೆ ಸಾರ್ವಜನಿಕರು, ವಿಶೇಷವಾಗಿ ಯುವಕರು ಜಾಗೃತರಾಗಬೇಕು. ತಮ್ಮ ಸುತ್ತಮುತ್ತ ನಡೆಯುವ ಅಕ್ರಮ ಚಟುವಟಿಕೆಗಳ ಬಗ್ಗೆ ಪೊಲೀಸರಿಗೆ ಮಾಹಿತಿ ನೀಡಿ, ಸಮಾಜವನ್ನು ಮಾದಕ ವ್ಯಸನದ ಕಪಿಮುಷ್ಟಿಯಿಂದ ರಕ್ಷಿಸುವಲ್ಲಿ ಪೊಲೀಸರ ಶಕ್ತಿವರ್ಧಕರಾಗಿ ಕಾರ್ಯನಿರ್ವಹಿಸಬೇಕು ಎಂದು ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ ಕರೆ ನೀಡಿದರು.

ನಗರದ ಶರಣಬಸವ ವಿಶ್ವವಿದ್ಯಾಲಯದ ದೊಡ್ಡಪ್ಪ ಅಪ್ಪ ಸಭಾಮಂಟಪದಲ್ಲಿ ಶರಣಬಸವ ವಿಶ್ವವಿದ್ಯಾಲಯ ಹಾಗೂ ಕಲಬುರಗಿ ನಗರ ಪೊಲೀಸ್ ಆಯುಕ್ತಾಲಯದ ಸಂಯುಕ್ತ ಆಶ್ರಯದಲ್ಲಿ ಮಂಗಳವಾರ ಆಯೋಜಿಸಿದ್ದ ಅಂತರರಾಷ್ಟ್ರೀಯ ಮಾದಕ ವಸ್ತು ದುರ್ಬಳಕೆ ಮತ್ತು ಅಕ್ರಮ ಸಾಗಾಣಿಕೆ ವಿರೋಧಿ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ಮಾದಕ ವಸ್ತುಗಳ ಹಾವಳಿಯನ್ನು ತಡೆಗಟ್ಟುವ ಜವಾಬ್ದಾರಿ ಕೇವಲ ಪೊಲೀಸ್ ಇಲಾಖೆ ಅಥವಾ ಭದ್ರತಾ ಸಂಸ್ಥೆಗಳದ್ದಲ್ಲ. ಸಮಾಜದ ಎಲ್ಲ ವರ್ಗದ ಜನರು, ವಿಶೇಷವಾಗಿ ಯುವಜನತೆ, ಅಕ್ರಮ ಮಾದಕ ವಸ್ತುಗಳ ಸಾಗಾಟ ಮತ್ತು ಮಾರಾಟದ ಬಗ್ಗೆ ನಿಗಾ ವಹಿಸಿ, ಅಂತಹ ಪ್ರಕರಣಗಳ ಮಾಹಿತಿ ಪೊಲೀಸರಿಗೆ ನೀಡುವ ಮೂಲಕ ಈ ಸಾಮಾಜಿಕ ಪಿಡುಗಿನ ವಿರುದ್ಧ ಹೋರಾಟದಲ್ಲಿ ಕೈಜೋಡಿಸಬೇಕು ಎಂದು ಹೇಳಿದರು.

ನಿಮ್ಮ ಸುತ್ತಮುತ್ತ ಯಾವುದೇ ಕಾನೂನುಬಾಹಿರ ಚಟುವಟಿಕೆ ಕಂಡುಬಂದರೆ ತಕ್ಷಣವೇ ಪೊಲೀಸರಿಗೆ ಮಾಹಿತಿ ನೀಡಿ ಅಥವಾ ತುರ್ತು ಸಹಾಯವಾಣಿ 112ಕ್ಕೆ ಕರೆ ಮಾಡಿ. ಮಾಹಿತಿ ನೀಡುವವರ ಗುರುತನ್ನು ಸಂಪೂರ್ಣ ಗೌಪ್ಯವಾಗಿಡಲಾಗುತ್ತದೆ ಎಂದು ಅವರು ವಿದ್ಯಾರ್ಥಿಗಳಿಗೆ ಭರವಸೆ ನೀಡಿದರು.

ಮಾದಕ ವ್ಯಸನವು ವ್ಯಕ್ತಿಯ ಜೀವನವನ್ನಷ್ಟೇ ಅಲ್ಲ, ಕುಟುಂಬ, ಸಮಾಜ ಮತ್ತು ರಾಷ್ಟ್ರದ ಅಭಿವೃದ್ಧಿಯ ಮೇಲೂ ಗಂಭೀರ ಪರಿಣಾಮ ಬೀರುತ್ತದೆ. ದೇಶದ ಭವಿಷ್ಯ ರೂಪಿಸುವ 18ರಿಂದ 35 ವರ್ಷದೊಳಗಿನ ಯುವಕರು ಹೆಚ್ಚಿನ ಪ್ರಮಾಣದಲ್ಲಿ ವ್ಯಸನಕ್ಕೆ ಬಲಿಯಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಈ ವಯಸ್ಸಿನಲ್ಲಿ ತಮ್ಮ ಪ್ರತಿಭೆ ಮತ್ತು ಶಕ್ತಿಯನ್ನು ರಾಷ್ಟ್ರ ನಿರ್ಮಾಣಕ್ಕೆ ಬಳಸಬೇಕಾದ ಯುವಕರು ವ್ಯಸನದ ದಾಸರಾಗುತ್ತಿರುವುದು ಕಳವಳಕಾರಿ ಸಂಗತಿ ಎಂದು ಶರಣಪ್ಪ ಹೇಳಿದರು.

ಕಾರ್ಯಕ್ರಮದಲ್ಲಿ ಉಪ ಪೊಲೀಸ್ ಆಯುಕ್ತ ಯಲ್ಲಂದೂರು ಶಾಲು ಮಾತನಾಡಿದರು. ಬಳಿಕ ಬೆಂಗಳೂರಿನ ಕಂಠೀರವ ಒಳಾಂಗಣ ಕ್ರೀಡಾಂಗಣದಲ್ಲಿ ನಡೆದ ರಾಜ್ಯಮಟ್ಟದ ಅಂತರರಾಷ್ಟ್ರೀಯ ಮಾದಕ ವಸ್ತು ದುರ್ಬಳಕೆ ಮತ್ತು ಅಕ್ರಮ ಸಾಗಾಣಿಕೆ ವಿರೋಧಿ ದಿನಾಚರಣೆ ಕಾರ್ಯಕ್ರಮವನ್ನು ನೇರ ಪ್ರಸಾರದ ಮೂಲಕ ವೀಕ್ಷಿಸಲಾಯಿತು.

ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಕುಲಸಚಿವ ಡಾ. ಲಕ್ಷ್ಮೀ ಪಾಟೀಲ ಮಕಾ, ಕುಲಸಚಿವ (ಮೌಲ್ಯಮಾಪನ) ಡಾ. ಎಸ್.ಎಚ್. ಹೊನ್ನಳ್ಳಿ, ಡೀನ್ ಡಾ. ಶಿವಕುಮಾರ ಜವಳಿಗಿ ಸೇರಿದಂತೆ ಹಲವು ಗಣ್ಯರು, ಬೋಧಕ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ಮತದಾರರಿಗೆ ಎನ್ಯೂಮರೇಶನ್ ಫಾರ್ಮ ನೀಡುವುದಕ್ಕೆ ಕ್ರಮ: ಭೀಮರಾಯ ಬಿ.ರಾಮಸಮುದ್ರ

ಮಾಡಲಾಗಿದು 12 ಬಿ.ಎಲ್.ಒ.ಗಳಿಗೆ ಒಬ್ಬರಂತೆ ಮೇಲ್ವಿಚಾರಕರನ್ನು ನೇಮಕ ಮಾಡಲಾಗಿದೆ .ಮಂಗಳವಾರ ಮೊದಲದಿನ ಮತದಾರರಿಂದ ಉತ್ತಮ ಸ್ಪಂದನೆ ದೊರೆತ್ತಿದು ಬಿ.ಎಲ್.ಒ.ಗಳು 4,284 ಎನ್ಯೂಮರೇಶನ್ ಫಾರ್ಮ ವಿತರಿಸಿದ್ದು ಅವರಲ್ಲಿ 965 ಮತದಾರರು ಎನ್ಯೂಮರೇಶನ್ ಫಾರ್ಮ ಅನ್ನು ತುಂಬಿ ಮರಳಿ ನೀಡಿದ್ದಾರೆ ಸ್ವೀಕರಿಸಿದ ಎಲ್ಲಾ ಎನ್ಯೂಮರೇಶನ್ ಫಾರ್ಮಗಳನ್ನು ಡೀಜಟಲಿಕರಣ ಕೂಡ ಮಾಡಲಾಗಿದೆ ಎಂದು ತಿಳಿಸಿದರು.

ಬಿ.ಎಲ್.ಒ.ಮೇಲ್ವಿಚಾರಕರಾದ ಆಂಜನೇಯ್ಯ ,ಕ್ಯಾಮಿನಾಯಕ ಹಾಗೂ ಬಿ.ಎಲ್.ಒ.ಗಳು ಇದ್ದರು.

ವಿಪ್ರೋತ್ಸವ-2026 ಸಂಭ್ರಮಕ್ಕೆ ರಾಯಚೂರು ಸಜ್ಜು

ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ನರಸಿಂಹರಾವ್ ದೇಶಪಾಂಡೆ, ವೇಣುಗೋಪಾಲಾಚಾರ್ ಇನಾಮದಾ,ರ್ ಪ್ರಾಣೇಶ್, ರಾಮರಾವ್, ವೆಂಕಟೇಶ್ ದೇಸಾಯಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಆಕಾಶವಾಣಿ ಕೇಂದ್ರದಲ್ಲಿ ವಯೋ ನಿವೃತ್ತಿಗೊಂಡ ಹಿರಿಯ ಟೆಕ್ನಿಷಿಯನ್ ಆಂಜನೇಯ್ಯರಿಗೆ ಬೀಳ್ಕೊಡುಗೆ

ಮಹತ್ವವನ್ನು ಸಾರಿದರು.

ಸೇವೆಯ ಉದ್ದಕ್ಕೂ ಶಿಸ್ತು, ಬದುಕನ್ನು ಪ್ರೀತಿಸಿದ ಅವರ ಕಾಳಜಿ, ವೃತ್ತಿಯಲ್ಲಿನ ಅಪಾರ ಪ್ರೀತಿ ಅವರ ಆಹಾರ ಪದ್ಧತಿಯಿಂದಲೇ ಆರೋಗ್ಯ ಕಾಪಾಡಿಕೊಂಡಿದ್ದಾರೆ ಎಂದರು.

ಸನ್ಮಾನ ಸ್ವೀಕರಿಸಿದ ನಿವೃತ್ತಿ ಹೊಂದಿದ ಹಿರಿಯ ಟೆಕ್ನಿಷಿಯನ್ ಆಂಜನೇಯ್ಯ ಮಾತನಾಡಿ, ಕಳೆದ 35ವರೇ ವರ್ಷಗಳಿಂದಲೂ ಅನೇಕ ಹಿರಿಯ ಅಕಾರಿಗಳ ಮಾರ್ಗದರ್ಶನದಲ್ಲಿ ಮಾಡಿದ ಸೇವೆಯ ಮೆಲಕು ಹಾಕಿದ ಅವರು, ಈ ವೃತ್ತಿಗೆ ಅಚಾನಕ್ಕಾಗಿ ಬಂದು ಬದುಕು ಕಟ್ಟಿಕೊಂಡಿರುವುದಾಗಿ ಹೇಳಿದರು.

ಬದುಕಿನ ಅನೇಕ ಏರಿಳಿತ ಕಂಡರೂ ಕುಟುಂಬದ ಬೆಂಬಲ, ಸಹೋದ್ಯೋಗಿಗಳ ಪ್ರೀತಿಯಿಂದಾಗಿ ಸುಖಿ ಸಂಸಾರ, ಜೀವನ ತಮ್ಮದಾಗಿದೆ. ತಮ್ಮ ವೃತ್ತಿ ಬದುಕಿನಲ್ಲಿ ಸಹಕರಿಸಿದ ಎಲ್ಲರಿಗೂ ಧನ್ಯವಾದ ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಕೇಂದ್ರದ ನಿರ್ದೇಶಕ ಅರವಿಂದಾಕ್ಷನ್ ಮಾತನಾಡಿ, ಸೇವಾ ನಿವೃತ್ತಿಯಾಗುತ್ತಿದ್ದು ಆಕಾಶವಾಣಿ ತಾಂತ್ರಿಕ ವಿಭಾಗದಲ್ಲಿ ಸಿಬ್ಬಂದಿ ಕೊರತೆ ಬಾಸುತ್ತಿದೆ. ಆದರೂ ಉತ್ತಮ ಸೇವೆ ಸಲ್ಲಿಸಿ ನಿವೃತ್ತಿಯಾಗುತ್ತಿರುವ ಆಂಜನೇಯ್ಯ ಅವರು ಕುಟುಂಬದೊಂದಿಗೆ ಪೂರ್ಣ ಪ್ರಮಾಣದ ಕೆಲಸ ಮಾಡಲಿ ಎಂದು ಶುಭ ಕೋರಿದರು.

ಲೆಕ್ಕಾಕಾರಿ ನಾಗಮಣಿ, ತಾಂತ್ರಿಕ ವಿಭಾಗದ ಸೋಮಶೇಖರ್ ಮಲ್ಲಿಕಾರ್ಜುನ ಪಾಟೀಲ, ಸಂಧ್ಯಾಕುಪನೇಶಿ, ವಿಶ್ವನಾಥ ಸಾಹುಕಾರ, ಸಮತಾ ಕುಮಾರಿ, ಶ್ರೀದೇವಿ, ರಮಾ ಕುಲಕರ್ಣಿ ಆಂಜನೇಯ್ಯ ಅವರ ಸಂಬಂ, ಕುವೆಂಪು ವಿವಿಯ ಡೀನ್ ಡಾ.ಚಂದ್ರಶೇಖರ, ಪುತ್ರಿ ಅರ್ಪಿತಾ ಸೇರಿ ಹಲವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ತಾಂತ್ರಿಕ ವಿಭಾಗದ ಸಿನಿಯರ್ ಇಂಜಿನಿಯರ್ ಎ.ಟಿ.ಅರಸು, ಶರಣಬಸಪ್ಪ, ಉದ್ಘೋಷಕರು, ಸಿಬ್ಬಂದಿ ಗಳಿದ್ದರು. ಕಾರ್ಯಕ್ರಮವನ್ನು ವೆಂಕಟೇಶ ಹೂಗಾರ ನಿರೂಪಿಸಿದರೆ, ವಿಶ್ವನಾಥ ಸಾಹುಕಾರ ವಂದಿಸಿದರು.

ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯ ಕಲ್ಯಾಣ ಯೋಜನೆಗಳ ಮಾಹಿತಿ

ಕಾರ್ಮಿಕರಿಗೆ ವೈದ್ಯಕೀಯ ನೆರವು: ಹೃದಯ ಶಸ್ತ ಚಿಕಿತ್ಸೆ . ಗಾಲ್ ಬ್ಲಾಡರ್ ತೊಂದರೆ, ಮೆದುಳಿನ ರಕ್ತಸ್ರಾವ, ಕಿಡ್ನಿ ಟ್ರಾನ್ಸ್ಪ್ಲಾಂಟೇಶನ್, ಕ್ಯಾನ್ಸ,ರ್ ಆಂಜಿಯೋಪ್ಲಾಸ್ಟಿ, ಕಣ್ಣು, ಆರ್ಥೋಪೆಡಿಕ್, ಗರ್ಭ ಕೋಶದ ಶಸ್ತರ ಚಿಕಿತ್ಸೆ , ಲಿವ,ರ್ ಹರ್ನಿಯ, ಕಿವಿ ಹಾಗೂ ಕಿಡ್ನಿ ಕಲ್ಲುಗಳ ಶಸ್ತ ಚಿಕಿತ್ಸೆ ಗಳಿಗೆ ಕನಿಷ್ಠ 1,000 ರೂ. ರಿಂದ ಗರಿಷ್ಠ 25,000 ರೂ.ವರೆಗೆ ಮತ್ತು ಪ್ರತಿ ಕಾರ್ಮಿಕರಿಗೆ ಆರೋಗ್ಯ ತಪಾಸಣೆಗೆ 500 ರೂ. ರಿಂದ 1000 ರೂ.ವರೆಗೆ ಸಹಾಯ ಧನ ನೀಡಲಾಗುವುದು. ಸೌಲಭ್ಯ ಪಡೆಯುವ ಕಾರ್ಮಿಕು ಚಿಕಿತ್ಸೆ ಪಡೆದ 6 ತಿಂಗಳೊಳಗೆ ನಿಗದಿತ ಅರ್ಜಿ ನಮೋನೆಯಲ್ಲಿ ಸಂಬದಪಟ್ಟ ಸಂಸ್ಥೆಗಳ ಹಾಗೂ ಕಾರ್ಖಾನೆಗಳು, ಕಾರ್ಯಸಂಸ್ಥೆಗಳ ಮುಖಾಂತರ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಿತಕ್ಕದ್ದು.


ಕಾರ್ಮಿಕರಿಗೆ ಅಪಘಾತ ಸಹಾಯಧನ: ಕಾಮೀಕರಿಗೆ ಕೆಲಸದ ಸ್ಥಳದಲ್ಲಿ ಅಪಘಾತವಾದಲ್ಲಿ ಕನಿಷ್ಠ 1000 ರೂ. ರಿಂದ ಗರಿಷ್ಠ 10,000 ರೂ.ವರೆಗೆ ಧನ ಸಹಾಯ ನೀಡಲಾಗುವುದು. ಸೌಲಭ್ಯ ಪಡೆಯುವ ಕಾರ್ಮಿಕರು ಅಪಘಾತವಾದ ಮೂರು ತಿಂಗಳೂಳಗೆ ವೈದ್ಯಕೀಯ ದಾಖಲೆಗಳೂಂದಿಗೆ ನಿಗದಿತ ಅರ್ಜಿ ನಮೂನೆಯಲ್ಲಿ ಸಂಬದಪಟ್ಟ ಸಂಸ್ಥೆಗಳ ಹಾಗೂ ಕಾರ್ಖಾನೆಗಳು, ಕಾರ್ಯಸಂಸ್ಥೆಗಳ ಮುಖಾಂತರ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬೇಕು.

ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೂಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಸಹಾಯಧನ: ಸಂಘಟಿತ ವಲಯದ ಕಾರ್ಮಿಕರ ಕ್ಷೇತ್ರದಲ್ಲಿ ಕೆಲಸ ನಿರ್ವಹಿಸುತ್ತಿರುವ ನೊಂದಾಯಿತ ಕಾರ್ಮಿಕ ಸಂಘಟನೆಗಳು ಕಲ್ಯಾಣ ಆಯುಕ್ತರ ಪೂರ್ವಾನುಮತಿಯೊಂದಿಗೆ ಹಮ್ಮಿಕೂಳ್ಳುವ ವಾರ್ಷಿಕ ಆರೋಗ್ಯ ತಪಾಸಣೆ ಶಿಬಿರಕ್ಕೆ 1,00,000 ರೂ. ಸಹಾಯಧನ ನೀಡಲಾಗುವುದು.

ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಸಹಾಯಧನ: ಸಂಘಟಿತ ವಲಯದ ಕಾರ್ಮಿಕರ ಕ್ಷೇತ್ರದಲ್ಲಿ ಕೆಲಸ ನಿರ್ವಹಿಸುತ್ತಿರುವ ನೊಂದಾಯಿತ ಕಾರ್ಮಿಕ ಸಂಘಟನೆಗಳು ಕಲ್ಯಾಣ ಆಯುಕ್ತರ ಪೂರ್ವಾನುಮತಿಯೋಂದಿಗೆ ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಂಡಲ್ಲಿ 1,00,000 ರೂ. ಸಹಾಯಧನ ನೀಡಲಾಗುವುದು. ಸಹಾಯಧನವನ್ನು ಫಲಾನುಭವಿಗಳ ಉಳಿತಾಯ ಖಾತೆಗೆ ನೇರವಾಗಿ ಓಇಈಖಿ/ಖಿಖಿಉ ಮೂಲಕ ಜಮಾ ಮಾಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಕಾರ್ಮಿಕ ಕಲ್ಯಾಣ ಭವನ ನಂ.48, 2ನೇ ಮಹಡಿ ಮತ್ತೀಕೆರೆ ಮುಖ್ಯರಸ್ತೆ, ಯಶವಂತಪುರ, ಬೆಂಗಳೂರು-560022. ದೂರವಾಣಿ ಸಂಖ್ಯೆ: 080-23475188, 8277291175, 8277120505, 9141602562ಗೆ ಸಂಪರ್ಕ ಮಾಡಬಹುದಾಗಿದೆ. ಅಥವಾ ವೆಬ್‌ಸೈಟ್ ವಿಳಾಸ: .... ಅಥವಾ ಇಮೇಲ್ ಐಡಿ: 123. ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಕಾರ್ಮಿಕ ಕಲ್ಯಾಣ ಮಂಡಳಿಯ ಆಯುಕ್ತರು ತಿಳಿಸಿದ್ದಾರೆ.

ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ನೇತೃತ್ವದಲ್ಲಿ ಮನೆ ಮನೆಗೆ ಫಾರಂ ವಿತರಣೆ



ಹೊಸಪೇಟೆ/ವಿಜಯನಗರ : ಮತದಾರರ ವಿಶೇಷ ತೀವ್ರ ಪರಿಷ್ಕರಣೆ () ಅಭಿಯಾನಕ್ಕೆ ವಿಜಯನಗರ ಜಿಲ್ಲೆಯಲ್ಲಿ ಮಂಗಳವಾರ ಅಧಿಕೃತ ಚಾಲನೆ ನೀಡಲಾಯಿತು. ಈ ಸಂದರ್ಭದಲ್ಲಿ ವಿಜಯನಗರ ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಅವರು ಹೊಸಪೇಟೆ ತಾಲೂಕಿನ ಕಮಲಾಪುರ ಪಟ್ಟಣದ ಸ್ವಾತಂತ್ರ್ಯ ಹೋರಾಟಗಾರ ದೇಸಾಯಿ ಗುಂಡೂರಾವ್ ಅವರ ನಿವಾಸಕ್ಕೆ ತೆರಳಿ ಎಸ್‌ಐಆರ್ ಅರ್ಜಿ ನಮೂನೆಯನ್ನು ವಿತರಿಸುವ ಮೂಲಕ ಅಭಿಯಾನಕ್ಕೆ ಚಾಲನೆ ನೀಡಿದರು.

ಜಿಲ್ಲಾಧಿಕಾರಿಯವರ ಆಗಮನವನ್ನು ಸ್ಥಳೀಯರು ಸಂಭ್ರಮದಿಂದ ಸ್ವಾಗತಿಸಿದರು. ಹಳೆ ಮಲಪನಗುಡಿಯ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಡೊಳ್ಳು ಕಲಾವಿದ ಕಾರ್ ಮಂಚಪ್ಪ ಹಾಗೂ ಅವರ ಕುಟುಂಬದವರು ಡೊಳ್ಳು ಬಾರಿಸಿ, ಆರತಿ ಬೆಳಗಿ ಜಿಲ್ಲಾಧಿಕಾರಿಯವರನ್ನು ಆತ್ಮೀಯವಾಗಿ ಬರಮಾಡಿಕೊಂಡರು. ಸಾಂಪ್ರದಾಯಿಕ ಸ್ವಾಗತದಿಂದ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ಮೂಡಿತು.

ಬಳಿಕ ಜಿಲ್ಲಾಧಿಕಾರಿಯವರು ಎಸ್‌ಐಆರ್ ಅಭಿಯಾನದ ಮಹತ್ವವನ್ನು ವಿವರಿಸಿ, ಮತದಾರರ ಪಟ್ಟಿಯನ್ನು ನಿಖರ ಹಾಗೂ ದೋಷರಹಿತವಾಗಿಡಲು ಪ್ರತಿಯೊಬ್ಬ ಅರ್ಹ ಮತದಾರರು ಅಗತ್ಯ ಮಾಹಿತಿಯನ್ನು ಸರಿಯಾಗಿ ಭರ್ತಿ ಮಾಡಿ ಅಧಿಕಾರಿಗಳಿಗೆ ಸಹಕರಿಸುವಂತೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ತಹಶೀಲ್ದಾರ್ ಶ್ರುತಿ ಗೌಡ, ಸಹಾಯಕ ಆಯುಕ್ತ ವಿವೇಕಾನಂದ, ಉಪ ತಹಶೀಲ್ದಾ,ರ್ ಬೂತ್ ಮಟ್ಟದ ಅಧಿಕಾರಿಗಳು () ಸೇರಿದಂತೆ ಕಂದಾಯ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ಜಿಲ್ಲೆಯಾದ್ಯಂತ ಎಸ್‌ಐಆರ್ ಅಭಿಯಾನವನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಮನೆ ಮನೆಗೆ ತೆರಳಿ ಅರ್ಜಿ ನಮೂನೆಗಳನ್ನು ವಿತರಿಸಲಾಗುತ್ತಿದ್ದು, ಸಾರ್ವಜನಿಕರು ಅಧಿಕಾರಿಗಳಿಗೆ ಅಗತ್ಯ ದಾಖಲೆಗಳನ್ನು ನೀಡಿ ಸಹಕರಿಸುವಂತೆ ಜಿಲ್ಲಾಡಳಿತ ಮನವಿ ಮಾಡಿದೆ.

ಎಸ್‌ಐಆರ್ ಪ್ರಕ್ರಿಯೆಗೆ ಸಾರ್ವಜನಿಕರ ಸಹಕಾರ ಅಗತ್ಯ : ರಾಹುಲ್ ಎಸ್. ಸಂಕನೂರ

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಬೈಕ್ ಜಾಗೃತಿ ರ್‍ಯಾಲಿಗೆ ಚಾಲನೆ



ಕಲಬುರಗಿ,ಜು.01-

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯ ಜಿಲ್ಲೆಯಲ್ಲಿ ಪ್ರಗತಿಯಲ್ಲಿದ್ದು, ಮನೆ-ಮನೆಗೆ ಭೇಟಿ ನೀಡುವ ಅಧಿಕಾರಿಗಳಿಗೆ ಸಾರ್ವಜನಿಕರು ಅಗತ್ಯ ಮಾಹಿತಿ ಹಾಗೂ ದಾಖಲೆಗಳನ್ನು ನೀಡಿ ಸಹಕರಿಸಬೇಕು. ಯಾವುದೇ ಅಪಪ್ರಚಾರಗಳಿಗೆ ಕಿವಿಗೊಡದೆ ಪ್ರಜಾಪ್ರಭುತ್ವದ ಈ ಮಹತ್ವದ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ ರಾಹುಲ್ ಎಸ್. ಸಂಕನೂರ ಮನವಿ ಮಾಡಿದರು.

ನಗರದ ಜಗತ್ ವೃತ್ತದಲ್ಲಿ ಭಾರತ ಚುನಾವಣಾ ಆಯೋಗ, ಕರ್ನಾಟಕ ಮುಖ್ಯ ಚುನಾವಣಾಧಿಕಾರಿಗಳ ಕಚೇರಿ, ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಸರ್ಕಾರಿ ಮಹಾವಿದ್ಯಾಲಯ (ಸ್ವಾಯತ್ತ)ದ ಸಂಯುಕ್ತ ಆಶ್ರಯದಲ್ಲಿ ಸೋಮವಾರ ಆಯೋಜಿಸಿದ್ದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ-2026 ಕುರಿತ ಬೈಕ್ ಜಾಗೃತಿ ರ್‍ಯಾಲಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಮತಗಟ್ಟೆಗಳ ಮ್ಯಾಪಿಂಗ್ ಪ್ರಕ್ರಿಯೆ ಯಶಸ್ವಿಯಾಗಿ ಪೂರ್ಣಗೊಂಡಿದ್ದು, ಪ್ರಸ್ತುತ ಮೂರನೇ ಹಂತದ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ನಡೆಯುತ್ತಿದೆ. ಮತಗಟ್ಟೆ ಮಟ್ಟದ ಅಧಿಕಾರಿಗಳು (ಬಿಎಲ್‌ಒಗಳು) ಮನೆ-ಮನೆಗೆ ಭೇಟಿ ನೀಡಿ ಎನ್ಯುಮರೇಷನ್ ಫಾರ್ಮ್ ಹಾಗೂ ಘೋಷಣಾ ಪತ್ರ ವಿತರಿಸಿ ಮಾಹಿತಿ ಸಂಗ್ರಹಿಸುತ್ತಿದ್ದಾರೆ ಎಂದು ತಿಳಿಸಿದರು.

ಊರಿನ ಹೊರಗಿರುವ ಮತದಾರರನ್ನು ದೂರವಾಣಿ ಮೂಲಕ ಸಂಪರ್ಕಿಸಿ ಮಾಹಿತಿ ಪಡೆಯಲಾಗುತ್ತಿದ್ದು, ಈ ಕಾರ್ಯದಲ್ಲಿ ಶಿಕ್ಷಕರು, ಆಶಾ ಕಾರ್ಯಕರ್ತೆಯರು ಹಾಗೂ ಅಂಗನವಾಡಿ ಸಿಬ್ಬಂದಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ ಎಂದು ಹೇಳಿದರು.

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಜೂನ್ 30ರಿಂದ ಜುಲೈ 29ರವರೆಗೆ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯಕ್ರಮ ನಡೆಯಲಿದ್ದು, ಪ್ರತಿಯೊಬ್ಬ ಅರ್ಹ ನಾಗರಿಕರ ಹೆಸರು ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗಿರುವುದನ್ನು ಖಚಿತಪಡಿಸುವುದೇ ಇದರ ಪ್ರಮುಖ ಉದ್ದೇಶವಾಗಿದೆ. ದೋಷರಹಿತ ಮತದಾರರ ಪಟ್ಟಿಯು ಪ್ರಜಾಪ್ರಭುತ್ವವನ್ನು ಮತ್ತಷ್ಟು ಬಲಪಡಿಸುತ್ತದೆ. ಆದ್ದರಿಂದ ಯಾವುದೇ ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ಎಲ್ಲರೂ ಜಾಗರೂಕರಾಗಬೇಕು ಎಂದು ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ, ಪ್ರಾದೇಶಿಕ ಜಂಟಿ ನಿರ್ದೇಶಕರ ಕಚೇರಿ (ಕಾಲೇಜು ಶಿಕ್ಷಣ ಇಲಾಖೆ), ಪದವಿ ಪೂರ್ವ ಶಿಕ್ಷಣ ಇಲಾಖೆ ಹಾಗೂ ತಾಲೂಕು ಪಂಚಾಯಿತಿ ಸಹಯೋಗದಲ್ಲಿ ಆಯೋಜಿಸಿದ್ದ ಬೈಕ್ ಜಾಗೃತಿ ರ್‍ಯಾಲಿಯು ಜಗತ್ ವೃತ್ತದಿಂದ ಆರಂಭವಾಗಿ ಅನ್ನಪೂರ್ಣ ಕ್ರಾಸ್, ಲಾಹೋಟಿ ಪೆಟ್ರೋಲ್ ಬಂಕ್, ತಿಮ್ಮಾಪುರ ವೃತ್ತ ಮಾರ್ಗವಾಗಿ ಮತ್ತೆ ಜಗತ್ ವೃತ್ತದಲ್ಲಿ ಸಮಾಪ್ತಿಯಾಯಿತು.

ರ್‍ಯಾಲಿಯ ಮೂಲಕ ಎಸ್‌ಐಆರ್ ಪ್ರಕ್ರಿಯೆ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಜಿಲ್ಲಾ ಸ್ವೀಪ್ ನೋಡಲ್ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಲಕ್ಷ್ಮಣ ಶೃಂಗೇರಿ, ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕ ಜಗದೇವಪ್ಪ, ಸಹಾಯಕ ಕಾರ್ಯದರ್ಶಿ ಚೆನ್ನಪ್ಪ, ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಮಾನಪ್ಪ ಕಟ್ಟಿಮನಿ, ಕಾಲೇಜು ಶಿಕ್ಷಣ ಇಲಾಖೆಯ ಅಧಿಕಾರಿಗಳು, ಪದವಿ ಹಾಗೂ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರು, ಬಿಎಲ್‌ಒಗಳು, ವಿವಿಧ ಇಲಾಖೆಗಳ ಅಧಿಕಾರಿಗಳು, ಅಂಗವಿಕಲರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಕಲಬುರಗಿ: ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಗೆ ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಚಾಲನೆ



ಕಲಬುರಗಿ,ಜು.01-

ನಗರದ ನ್ಯೂ ರಾಘವೇಂದ್ರ ಕಾಲೊನಿಯಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆಯ (ಎಸ್‌ಐಆರ್) ಕಾರ್ಯದ ಭಾಗವಾಗಿ ಬಿಎಲ್‌ಒಗಳು ಮನೆ ಮನೆಗೆ ತೆರಳಿ ಮತದಾರರ ಮಾಹಿತಿ ಸಂಗ್ರಹಿಸುವ ಕೆಲಸಕ್ಕೆ ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ನೇತೃತ್ವದಲ್ಲಿ ಮಂಗಳವಾರ ಚಾಲನೆ ನೀಡಲಾಯಿತು.

ಶಿಲ್ಪಕಲಾ ಕ್ಷೇತ್ರದಲ್ಲಿ ರಾಷ್ಟ್ರೀಯ ಕರಕುಶಲ ಪ್ರಶಸ್ತಿ ಪುರಸ್ಕೃತ ಕಲಾವಿದರಾದ ಚಂದ್ರಶೇಖರ ವೈ. ಶಿಲ್ಪಿ ಅವರ ಕುಟುಂಬದ ಸದಸ್ಯರಿಗೆ ಎಸ್‌ಐಆರ್ ನಮೂನೆಗಳನ್ನು ವಿತರಿಸಿ, ಅವರಿಂದ ಮಾಹಿತಿ ಪಡೆಯಲಾಯಿತು.

ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಜಿಲ್ಲಾಧಿಕಾರಿ ಇಕ್ರಮ್ ಶರೀಫ್, ಜಿಲ್ಲೆಯ ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಆರಂಭಗೊಂಡಿದ್ದು, ಯಾವುದೇ ಅರ್ಹ ಮತದಾರರ ಹೆಸರು ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ಎಲ್ಲ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಒಟ್ಟು 2,400 ಮತಗಟ್ಟೆಗಳು ಇದ್ದು, ಎಲ್ಲ ಮತಗಟ್ಟೆ ಮಟ್ಟದ ಅಧಿಕಾರಿಗಳಿಗೆ (ಬಿಎಲ್‌ಒ) ಎರಡು ಹಂತಗಳಲ್ಲಿ ಸಮಗ್ರ ತರಬೇತಿ ನೀಡಲಾಗಿದೆ. ಜೂನ್ 30ರಿಂದ ಬಿಎಲ್‌ಒಗಳು ಮನೆಮನೆಗೆ ಭೇಟಿ ನೀಡಿ ಎಸ್‌ಐಆರ್ ಎನ್ಯುಮರೇಷನ್ ನಮೂನೆಗಳನ್ನು ವಿತರಿಸುವ ಕಾರ್ಯ ಆರಂಭಿಸಿದ್ದು, ಬಳಿಕ ಸಾರ್ವಜನಿಕರಿಂದ ಭರ್ತಿ ಮಾಡಿದ ನಮೂನೆಗಳನ್ನು ಪಡೆದು ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡಲಾಗುವುದು ಎಂದು ತಿಳಿಸಿದರು.

ಮೊದಲ ಹಂತದಲ್ಲಿ ಮನೆಗಳಿಗೆ ತೆರಳಿ ಅರ್ಜಿಗಳನ್ನು ವಿತರಿಸಲು ಆದ್ಯತೆ ನೀಡಲಾಗಿದ್ದು, ನಂತರ ಭರ್ತಿ ಮಾಡಿದ ಅರ್ಜಿಗಳನ್ನು ಸಂಗ್ರಹಿಸಿ ಡಿಜಿಟಲ್ ವ್ಯವಸ್ಥೆಗೆ ದಾಖಲಿಸಲಾಗುತ್ತದೆ. ಈ ವಿಶೇಷ ಪರಿಷ್ಕರಣೆ ಪ್ರಕ್ರಿಯೆಯು ಒಂದು ತಿಂಗಳ ಕಾಲ ನಡೆಯಲಿದೆ ಎಂದು ಹೇಳಿದರು.

ಎಸ್‌ಐಆರ್ ಪ್ರಕ್ರಿಯೆ ಮುಗಿದ ಬಳಿಕ ಹೊಸ ಮತದಾರರ ನೋಂದಣಿ ಪ್ರಕ್ರಿಯೆ ಎಂದಿನಂತೆ ಫಾರಂ-6 ಮೂಲಕ ಮುಂದುವರಿಯಲಿದ್ದು, ಮತದಾರರ ಪಟ್ಟಿಯಲ್ಲಿ ಹೆಸರು ಸೇರಿಸಿಕೊಳ್ಳಲು ಅರ್ಹರು ಈ ಅವಕಾಶವನ್ನು ಬಳಸಿಕೊಳ್ಳಲಿದ್ದಾರೆ ಎಂದರು.

ಜಿಲ್ಲೆಯಲ್ಲಿ ಈಗಾಗಲೇ ಶೇ. 95ರಷ್ಟು ಮತಗಟ್ಟೆಗಳ ಮ್ಯಾಪಿಂಗ್ ಕಾರ್ಯ ಪೂರ್ಣಗೊಂಡಿದ್ದು, ಉಳಿದ ಕಾರ್ಯವೂ ಶೀಘ್ರದಲ್ಲೇ ಪೂರ್ಣಗೊಳ್ಳಲಿದೆ. ಜಿಲ್ಲೆಯ ಯಾವುದೇ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ಅಧಿಕಾರಿಗಳಿಗೆ ಅಗತ್ಯ ನಿರ್ದೇಶನ ನೀಡಲಾಗಿದೆ ಎಂದು ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಸ್ಪಷ್ಟಪಡಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಸಿಇಒ ರಾಹುಲ್ ಸಂಕನೂರ, ಪಾಲಿಕೆ ಆಯುಕ್ತ ಅವಿನಾಶ ಶಿಂದೆ, ಹೆಚ್ಚುವರಿ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಕಲಬುರಗಿ ತಹಸೀಲ್ದಾರ್ ಆನಂದಶೀಲ, ಪಾಲಿಕೆ ಉಪ ಆಯುಕ್ತೆ ಪ್ರಮೀಳಾ ಸೇರಿದಂತೆ ಬಿಎಲ್‌ಒ, ಸೂಪರ್‌ವೈಸರ್ ಮತ್ತಿತರರು ಇದ್ದರು.



ಬಳ್ಳಾರಿಯಲ್ಲಿ ನೂತನ 'ನಂದಿನಿ ಏಕವಿನ್ಯಾಸ ಪಾರ್ಲರ್ ಉದ್ಘಾಟನೆ: 160ಕ್ಕೂ ಹೆಚ್ಚು ಉತ್ಪನ್ನಗಳು ಗ್ರಾಹಕರಿಗೆ ಲಭ್ಯ

ಬಳ್ಳಾರಿ,ಜೂ.01-

ರಾಯಚೂರು, ಬಳ್ಳಾರಿ ಮತ್ತು ಕೊಪ್ಪಳ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟದ ವತಿಯಿಂದ ಬಳ್ಳಾರಿ ನಗರದ ಕೋಟೆ ಪ್ರದೇಶದಲ್ಲಿರುವ ಸೇಂಟ್ ಜಾನ್ಸ್ ಶಾಲೆಯ ಮುಂಭಾಗದಲ್ಲಿ ನೂತನ ನಂದಿನಿ ಏಕವಿನ್ಯಾಸ ಪಾಲರ್ ಮಂಗಳವಾರ ಉದ್ಘಾಟಿಸಲಾಯಿತು.

ಒಕ್ಕೂಟದ ಆಡಳಿತ ಮಂಡಳಿ ನಿರ್ದೇಶಕರುಗಳಾದ ಅಮರಗುಂಡಪ್ಪ, ಐಗೋಳ ಚಿದಾನಂದ ಹಾಗೂ ನಾಗೇಶ್ವರರಾವ್ ಅವರು ಜಂಟಿಯಾಗಿ ನೂತನ ಪಾರ್ಲರ್ ಅನ್ನು ಉದ್ಘಾಟಿಸಿದರು. ಬಳಿಕ ಮಾತನಾಡಿದ ಅತಿಥಿಗಳು, ನಂದಿನಿ ಬ್ರ್ಯಾಂಡ್ ಅಡಿಯಲ್ಲಿ ಸದ್ಯ ಸುಮಾರು 160ಕ್ಕೂ ಅಧಿಕ ವೈವಿಧ್ಯಮಯ ಹಾಲಿನ ಉತ್ಪನ್ನಗಳು ಲಭ್ಯವಿದ್ದು, ಸಾರ್ವಜನಿಕರು ಹಾಗೂ ಗ್ರಾಹಕರು ಇದರ ಸಂಪೂರ್ಣ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು.

ಪ್ರಭಾರ ವ್ಯವಸ್ಥಾಪಕ (ಮಾರುಕಟ್ಟೆ) ಎಸ್. ವೆಂಕಟೇಶ ಗೌಡ ಅವರು ಮಾತನಾಡಿ, ಹಾಲು ಮತ್ತು ಹಾಲಿನ ಉತ್ಪನ್ನಗಳ ಬಳಕೆಯ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದ ಅವರು, ಹಾಲಿನಲ್ಲಿರುವ ಕ್ಯಾಲ್ಸಿಯಂ, ಪ್ರೋಟೀನ್ ಹಾಗೂ ವಿಟಮಿನ್-ಬಿ2 ನಂತಹ ಪ್ರಮುಖ ಪೋಷಕಾಂಶಗಳು ಆರೋಗ್ಯ ರಕ್ಷಣೆಗೆ ಹೇಗೆ ಸಹಕಾರಿ ಎಂಬುದನ್ನು ವಿವರಿಸಿದರು. ಮಾನವನ ದೈನಂದಿನ ಜೀವನದಲ್ಲಿ ಹಾಲಿನ ಅಗತ್ಯತೆ ಮತ್ತು ಪ್ರಾಮುಖ್ಯತೆಯ ಬಗ್ಗೆ ಸವಿವರವಾಗಿ ಮಾಹಿತಿ ನೀಡಿದರು. ರಾಯಚೂರು, ಬಳ್ಳಾರಿ ಮತ್ತು ಕೊಪ್ಪಳ ಹಾಲು ಒಕ್ಕೂಟವು ಲಕ್ಷಾಂತರ ಹೈನುಗಾರರು ಹಾಗೂ ಗ್ರಾಹಕರನ್ನು ಒಳಗೊಂಡ ಬೃಹತ್ ಸಹಕಾರಿ ಸಂಸ್ಥೆಯಾಗಿದೆ. ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಾದ ಕ್ಷೀರಭಾಗ್ಯ ಮತ್ತು ಕ್ಷೀರಧಾರೆಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುತ್ತಾ ಬಂದಿರುವ ಒಕ್ಕೂಟವು, ಪ್ರತಿದಿನ ಸರಾಸರಿ 2.0 ಲಕ್ಷ ಲೀಟರ್ ಗುಣಮಟ್ಟದ ಹಾಲನ್ನು ಶೇಖರಿಸುತ್ತಿದೆ. ಇದನ್ನು ವೈಜ್ಞಾನಿಕವಾಗಿ ಸಂಸ್ಕರಿಸಿ, ಪರಿಶುದ್ಧ ಹಾಗೂ ಕಲಬರಕೆ ರಹಿತ ನಂದಿನಿ ಹಾಲು ಮತ್ತು ಉತ್ಪನ್ನಗಳನ್ನು ಗ್ರಾಹಕರಿಗೆ ಸುರಕ್ಷಿತವಾಗಿ ತಲುಪಿಸಲಾಗುತ್ತಿದೆ ಎಂದು ಒಕ್ಕೂಟವು ತಿಳಿಸಿದೆ. ಈ ಸಂದರ್ಭದಲ್ಲಿ ಒಕ್ಕೂಟದ ಮಾರುಕಟ್ಟೆ ಸಹಾಯಕರು (ದರ್ಜೆ-2) ಗಳಾದ ಲೋಹಿತಕುಮಾರ ಹಾಗೂ ಪ್ರಸನ್ನಕುಮಾರ, ಸಿಬ್ಬಂದಿಗಳಾದ ಸಿ.ಎನ್. ಮಂಜುನಾಥ, ಬಾಬು ಮತ್ತು ಪಾರ್ಲರ್ ಡೀಲರ್ ಆದ ಸಿದ್ದಾರ್ಥ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.


ಕೊಪ್ಪಳದಲ್ಲಿ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಜಾಗೃತಿಗಾಗಿ ವಾಕ್ ಥಾನ್

ಎಸ್‌ಐಆರ್ ಪ್ರಕ್ರಿಯಲ್ಲಿ ಎಲ್ಲರೂ ಭಾಗವಹಿಸಿ ಮಾಹಿತಿ ನೀಡಿ: ಜಿಲ್ಲಾಧಿಕಾರಿ ಡಾ. ಸುರೇಶ್ ಇಟ್ನಾಳ

ಕೊಪ್ಪಳ,ಜು.01-

ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (ಎಸ್.ಐ.ಆರ್) ಪ್ರಕ್ರಿಯೆ ಆರಂಭವಾಗಿದ್ದು, ಬಿಎಲ್‌ಓಗಳು ಎಸ್.ಐ.ಆರ್ ಅರ್ಜಿಯನ್ನು ನೀಡಲಿದ್ದು ಎಲ್ಲ ಮತದಾರರು ಗಣತಿ ನಮೂನೆಯನ್ನು ಭರ್ತಿ ಮಾಡಿ ಸಹಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ. ಸುರೇಶ್ ಬಿ. ಇಟ್ನಾಳ ಅವರು ಹೇಳಿದರು.

ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ (ಎಸ್.ಐ.ಆ)ರ್-2026 ಕುರಿತು ಜಾಗೃತಿಗಾಗಿ ಕೊಪ್ಪಳ ನಗರದ ಪ್ರವಾಸಿ ಮಂದಿರ ಬಳಿ ಮಂಗಳವಾರ (ಜೂ. 30ರಂದು) ಹಮ್ಮಿಕೊಂಡಿದ್ದ ವಾಕಥಾನ್ ಜಾಥಾಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.



ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಆರಂಭವಾಗಿದ್ದು, ಜೂನ್ 30ರಿಂದ ಜುಲೈ 29ರವರೆಗೆ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಓ) ಮನೆ ಮನೆಗೆ ಭೇಟಿ ನೀಡಿ ಮತದಾರರ ವಿವರಗಳನ್ನು ಪರಿಶೀಲಿಸಲಿದ್ದಾರೆ. ಮತದಾರರು ಎಸ್‌ಐಆರ್ ಅರ್ಜಿಯನ್ನು ಭರ್ತಿ ಮಾಡಿ ಸಲ್ಲಿಸಬೇಕು. ಮತದಾರರ ಪಟ್ಟಿಯಲ್ಲಿರುವ ಹೆಸರುಗಳ ಪರಿಶೀಲನೆ, ತಿದ್ದುಪಡಿ, ಹೊಸ ಮತದಾರರ ಹೆಸರು ಸೇರ್ಪಡೆ, ಮೃತಪಟ್ಟವರು ಹಾಗೂ ಸ್ಥಳಾಂತರಗೊಡವರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕುವ ಪ್ರಕ್ರಿಯೆಯೂ ನಡೆಯಲಿದೆ. ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದರು. ಗಣತಿ ನೋಂದಣಿ ಅರ್ಜಿಗೆ ಮತದಾರ ಕುಟುಂಬದ 'ವರು ಯಾರಾದರೂ ಸಹಿ ಮಾಡಬಹುದು. ಈಗಾಗಲೇ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ಜಾಗೃತಿ ಮೂಡಿಸಲು ಬಿಎಲ್‌ಓಗಳು ಹಾಗೂ ಬಿಎಲ್‌ಎಗಳ ಸಭೆ, ತರಬೇತಿ ನಡೆಸಿ ಎಲ್ಲ ಮಾಹಿತಿ ನೀಡಲಾಗಿದೆ. ಬಿಎಲ್‌ಓಗಳು ಹಾಗೂ ಬಿಎಲ್‌ಎಗಳು ಸಮನ್ವಯದಿಂದ ಕೆಲಸ ಮಾಡಿದರೇ ಅರ್ಹ ಮತದಾರರು ಮತದಾರ ಪಟ್ಟಿಯಿಂದ ಹೊರಗುಳಿಯುವುದನ್ನು ತಪ್ಪಿಸಬಹುದು ಎಂದು ಹೇಳಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗ ಳಾದ ವರ್ಣಿತ್ ನೇಗಿ ಅವರು ಮಾತನಾಡಿ, ಚುನಾವಣಾ ಆಯೋಗದ ಸೂಚನೆಯಂತೆ ಎಸ್‌ಐಆರ್ 2026ರ ಪ್ರಕ್ರಿಯೆಯಲ್ಲಿ ಸಾರ್ವಜನಿಕರು ಭಾಗವಹಿಸಿ ಅಗತ್ಯ ಮಾಹಿತಿ ಒದಗಿಸಬೇಕು. ಒಬ್ಬ ಮತದಾರ ಎರಡು ಕಡೆ ಮತದಾರ ಪಟ್ಟಿಯಲ್ಲಿ ಹೆಸರು ಹೊಂದುವುದು ಶಿಕ್ಷಾರ್ಹ ಅಪರಾಧವಾಗಿದೆ. ಪಟ್ಟಿಯಲ್ಲಿ ನೈಜ ಮತದಾರರ ಹೆಸರು ಕೈ ತಪ್ಪಿ ಹೋಗದಂತೆ ನೋಡಿಕೊಳ್ಳಬೇಕು. ಅರ್ಹ ಮತದಾರರು ಬಿಟ್ಟುಹೋಗದಂತೆ ಅನರ್ಹ ಮತದಾರರು ಸೇರ್ಪಡೆ ಆಗದಂತೆ ಎಲ್ಲರೂ ಕಾರ್ಯನಿರ್ವಹಿಸಬೇಕು ಎಂದರು.

ವಾಕ್ ಥಾನ್: ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆ)ರ್-2026 ಜಾಗೃತಿಗಾಗಿ ನಗರದ ಪ್ರವಾಸಿ ಮಂದಿರದಿಂದ ಅಶೋಕ ವೃತ್ತ, ಬಸವೇಶ್ವರ ವೃತ್ತ ಮಾರ್ಗವಾಗಿ ಅಧಿಕಾರಿಗಳು, ಕಾಲೇಜು ವಿದ್ಯಾರ್ಥಿಗಳೊಂದಿಗೆ ವಾಕಥಾನ್ ಜಾಥಾ ನಡೆಯಿತು. ವಿದ್ಯಾರ್ಥಿಗಳು ಮತದಾನ ಹಾಗೂ ಎಸ್‌ಐಆರ್ ಕುರಿತು ಘೋಷಣೆಗಳನ್ನು ಕೂಗಿ ಜಾಗೃತಿ ಮೂಡಿಸಿದರು. ಈ ಸಂದರ್ಭದಲ್ಲಿ ಕೊಪ್ಪಳ ಸಹಾಯಕ ಆಯುಕ್ತರಾದ ಮಹೆಬೂಬ್ ಜೀಲಾನ್, ಜಿ.ಪಂ ಉಪ ಕಾರ್ಯದರ್ಶಿಗಳಾದ ಟಿ.ಕೃಷ್ಣಮೂರ್ತಿ, ಯೋಜನ ನಿರ್ದೇಶಕರಾದ ಎಸ್.ಎಂ. ಕಾಂಬಳೆ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಂಜುನಾಥ ಗುಂಡೂರು ಸೇರಿ ಜಿಲ್ಲಾ ಮತ್ತು ತಾಲೂಕ ಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿ ವಾಕ್ ಥಾನದಲ್ಲಿ ಭಾಗವಹಿಸಿದರು.

ನಿಮ್ಮೂರು ಸುದ್ದಿ

ಸಂಪಾದಕೀಯ



ನ್ಯಾಯದಾನ ವಿಳಂಬಕ್ಕೆ ಯಾರ ಹೊಣೆ?

ದೇಶದಲ್ಲಿ ಕೆಳ ಹಂತದ ನ್ಯಾಯಾಲಯಗಳಿಂದ ಹಿಡಿದು ಸರ್ವೋಚ್ಚ ನ್ಯಾಯಾಲಯದ ವರೆಗೆ ಸಾವಿರಾರು ಪ್ರಕರಣಗಳು ವಿಚಾರಣೆಯ ಹಂತದಲ್ಲಿ ಬಾಕಿ ಉಳಿದಿವೆ. ಸರ್ವೋಚ್ಚ ನ್ಯಾಯಾಲಯವೊಂದರಲ್ಲೇ 93 ಸಾವಿರಕ್ಕಿಂತ ಹೆಚ್ಚು ಪ್ರಕರಣಗಳು ವಿಚಾರಣೆಗಾಗಿ ಕಾದಿವೆ. ಇದಕ್ಕೆ ನ್ಯಾಯಾಧೀಶರ ಕೊರತೆ ಬಹುಮುಖ್ಯ ಕಾರಣಗಳಲ್ಲೊಂದಾಗಿದೆ. ಈ ಹಿನ್ನೆಲೆಯಲ್ಲಿ ಸರ್ವೋಚ್ಚ ನ್ಯಾಯಾಲಯದ ನ್ಯಾಯಾಧೀಶರ ಸಂಖ್ಯೆಯನ್ನು 34ರಿಂದ 38ಕ್ಕೆ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗಿದೆ. 2019ರಲ್ಲಿ ನ್ಯಾಯಾಧೀಶರ ಸಂಖ್ಯೆಯನ್ನು 31ರಿಂದ 34ಕ್ಕೆ ಹೆಚ್ಚಿಸಲಾಗಿತ್ತು. ನ್ಯಾಯಾಧೀಶರ ನೇಮಕಾತಿ ನಂತರವೂ ವಿಚಾರಣೆಯ ಹಂತದಲ್ಲಿ ಇರುವ ಪ್ರಕರಣಗಳ ಸಂಖ್ಯೆ ಶೇ. 50ರಷ್ಟು ಹೆಚ್ಚಾಗಿದೆ.

ನ್ಯಾಯಾಲಯದಲ್ಲಿರುವ ಪ್ರಕರಣಗಳು ಬಾಕಿ ಉಳಿಯಲು ನ್ಯಾಯಾಧೀಶರ ಸಂಖ್ಯೆ ಕಡಿಮೆ ಇರುವುದೊಂದೇ ಕಾರಣವಲ್ಲ. ಇಡೀ ನ್ಯಾಯಾಲಯಗಳ ವ್ಯವಸ್ಥೆಯ ಮೂಲಭೂತ ಬದಲಾವಣೆ ಅಗತ್ಯವಾಗಿದೆ. ಸುಪ್ರೀಂ ಕೋರ್ಟ್‌ನಲ್ಲಿ ಪ್ರಕರಣವೊಂದು ಇತ್ಯರ್ಥವಾಗಲು ಕನಿಷ್ಠ ಒಂದರಿಂದ ಮೂರು ವರ್ಷಗಳು ಬೇಕಾಗುತ್ತವೆ. ಹಲವು ಪ್ರಕರಣಗಳು 13-14 ವರ್ಷಗಳಿಗಿಂದ ವಿಚಾರಣೆಯಿಲ್ಲದೆ ಉಳಿದಿವೆ.

ವಾಸ್ತವ ಸಂಗತಿಯೆಂದರೆ ಸರ್ವೋಚ್ಚ ನ್ಯಾಯಾಲಯಕ್ಕೆ ಮಂಜೂರಾಗಿರುವ ನ್ಯಾಯಾಧೀಶರನ್ನು ಸಂಪೂರ್ಣವಾಗಿ ಭರ್ತಿ ಮಾಡಿಕೊಳ್ಳಲು ಈ ವರೆಗೆ ಆಗಿಲ್ಲ. ಇದಕ್ಕೆ ಹಲವಾರು ಕಾರಣಗಳಿವೆ. ಉಳಿದವುಗಳಿಗಿಂತ ಮುಖ್ಯ ಕಾರಣವೆಂದರೆ, ಸರ್ವೋಚ್ಚ ನ್ಯಾಯಾಲಯದ ಹಿರಿಯ ನ್ಯಾಯಾಧೀಶರ ಸಮಿತಿಯ(ಕೊಲಿಜಿಯಂ) ಜೊತೆಗಿನ ಭಿನ್ನಾಭಿಪ್ರಾಯಗಳಿಂದಾಗಿ ಹೊಸ ನ್ಯಾಯಾಧೀಶರನ್ನು ನೇಮಕ ಮಾಡಲು ನರೇಂದ್ರ ಮೋದಿಯವರ ಕೇಂದ್ರ ಸರಕಾರ ಬೇಕಂತಲೇ ವಿಳಂಬ ಮಾಡುತ್ತಿರುವುದಾಗಿದೆ.ಕೇಂದ್ರ ಸರಕಾರದ ಈ ನಕಾರಾತ್ಮಕ ನೀತಿಯಿಂದಾಗಿ ತಾನು ವಿಚಾರಣೆಗೆ ಕೈಗೆತ್ತಿಕೊಳ್ಳಲು ಒಪ್ಪಿಕೊಳ್ಳುವ ಪ್ರಕರಣಗಳ ವಿಚಾರದಲ್ಲಿ ನ್ಯಾಯಾಲಯ ಹಿಂದೆ ಮುಂದೆ ನೋಡಬೇಕಾಗಿ ಬಂದಿದೆ. ಹಲವು ಪ್ರಕರಣಗಳು ಸರ್ವೋಚ್ಚ ನ್ಯಾಯಾಲಯ ವಿಚಾರಣೆಗೆ ಕೈಗೆತ್ತಿಕೊಳ್ಳಬೇಕಾದಷ್ಟು ಗಂಭೀರವಾಗಿ ಇರುವುದಿಲ್ಲ ಎಂಬ ಅಭಿಪ್ರಾಯವೂ ಇದೆ.

ವಿಚಾರಣೆಯ ಹಂತದಲ್ಲಿ ಇರುವ ಪ್ರಕರಣಗಳ ಇತ್ಯರ್ಥಕ್ಕೆ ನ್ಯಾಯಾಧೀಶರ ಸಂಖ್ಯೆಯನ್ನು ಹೆಚ್ಚಿಸುವ ಜೊತೆಗೆ ಹೊಸ ತಂತ್ರಜ್ಞಾನವನ್ನು ಬಳಸಿಕೊಳ್ಳಬೇಕೆಂಬ ಸಲಹೆಗಳು ಬಂದಿವೆ. ಉದಾಹರಣೆಗೆ ಡಿಜಿಟಲ್ ಇ-ಫೈಲಿಂಗ್ ವ್ಯವಸ್ಥೆಯನ್ನು ಹೆಚ್ಚು ಬಳಸಿಕೊಳ್ಳಬಹುದಾಗಿದೆ. ಇದರಿಂದ ಸಮಯ ವ್ಯಯವಾಗುವುದನ್ನು ತಪ್ಪಿಸಲು ಸಾಧ್ಯವಾಗುತ್ತದೆ. ವಾದ, ಪ್ರತಿವಾದಗಳನ್ನು ಕೇಳಲು ಸಮಯ ಮಿತಿಯನ್ನು ನಿಗದಿ ಪಡಿಸುವುದು ಅಗತ್ಯವಾಗಿದೆ. ಅನಗತ್ಯದ ಸಣ್ಣಪುಟ್ಟ ಪ್ರಕರಣಗಳನ್ನು ನ್ಯಾಯಾಲಯಕ್ಕೆ ತರದೆ, ಹೊಸ ತಂತ್ರಜ್ಞಾನ ಬಳಸಿ ಬಗೆಹರಿಸಿಕೊಳ್ಳಬಹುದಾಗಿದೆ. ವಾಸ್ತವವಾಗಿ ಸರ್ವೋಚ್ಚ ನ್ಯಾಯಾಲಯ ಸೇರಿದಂತೆ ಎಲ್ಲ ನ್ಯಾಯಾಲಯಗಳಲ್ಲಿ ಸರಕಾರದ ಮೊಕದ್ದಮೆಗಳ ಸಂಖ್ಯೆ ದೊಡ್ಡದಿದೆ. ಅನೇಕ ಪ್ರಕರಣಗಳಲ್ಲಿ ನ್ಯಾಯಾಲಯದ ಮಧ್ಯ ಪ್ರವೇಶವೂ ಅಗತ್ಯವಿರುವುದಿಲ್ಲ.

ಸರ್ವೋಚ್ಚ ನ್ಯಾಯಾಲಯದ ಪರಿಸ್ಥಿತಿ ಇದಾದರೆ ದೇಶದ ಕೆಳ ಹಂತದ ನ್ಯಾಯಾಲಯಗಳ ಸ್ಥಿತಿ ಭಿನ್ನವಾಗಿಯೇನೂ ಇಲ್ಲ. ಕೆಳ ಹಂತದ ನ್ಯಾಯಾಲಯಗಳಲ್ಲಿ ನ್ಯಾಯದಾನ ಸಕಾಲಕ್ಕೆ ಒದಗುವುದೇ ಇಲ್ಲ. ನ್ಯಾಯದಾನದ ವಿಳಂಬ ಸಾಮಾನ್ಯವಾಗಿದೆ. ಹೈಕೋರ್ಟ್‌ಗಳಲ್ಲಿ 57 ಲಕ್ಷಕ್ಕಿಂತ ಹೆಚ್ಚು ಪ್ರಕರಣಗಳು ಬಾಕಿ ಉಳಿದಿವೆ. ಜಿಲ್ಲಾ ಮತ್ತು ಇತರ ಅಧೀನ ನ್ಯಾಯಾಲಯಗಳಲ್ಲಿ ಬಾಕಿ ಉಳಿದ ಪ್ರಕರಣಗಳ ಸಂಖ್ಯೆ 4.3 ಕೋಟಿಗಿಂತ ಜಾಸ್ತಿ ಇದೆ. ಹೀಗಿರುವುದರಿಂದ ನ್ಯಾಯದ ನಿರೀಕ್ಷೆಯಲ್ಲಿ ಇರುವವರಿಗೆ ಬದುಕಿರುವಾಗ ನ್ಯಾಯ ಸಿಗುವುದು ಸುಲಭವಲ್ಲ. ಹೀಗಾಗಿ ಅನೇಕ ಜನರ ಆಯುಷ್ಯವೆಲ್ಲ ನ್ಯಾಯಾಲಯಗಳಿಗೆ ಎಡತಾಕುವುದರಲ್ಲೇ ಕಳೆದುಹೋಗುತ್ತದೆ.

ನ್ಯಾಯಾಲಯಗಳಲ್ಲಿ ಪ್ರಕರಣಗಳ ವಿಚಾರಣೆ ಈಗಿನ ವೇಗದಲ್ಲಿ ನಡೆದರೆ 300 ವರ್ಷಕ್ಕಿಂತ ಹೆಚ್ಚು ವರ್ಷಗಳು ಬೇಕಾಗಬಹುದು ಎಂದು ಅಂದಾಜು ಮಾಡಲಾಗಿದೆ. ವಿಶೇಷವಾಗಿ ಕೆಳ ಹಂತದ ನ್ಯಾಯಾಲಯಗಳಲ್ಲಿ ಬಾಕಿ ಉಳಿದಿರುವ ಪ್ರಕರಣಗಳು ಜನಸಾಮಾನ್ಯರನ್ನು ಹೆಚ್ಚು ಬಾಧಿಸುತ್ತವೆ. ಆದ್ಯತೆಯ ಮೇಲೆ ಇಂತಹ ಪ್ರಕರಣಗಳನ್ನು ಇತ್ಯರ್ಥ ಮಾಡಬೇಕಾಗಿದೆ.

ಅತ್ಯಂತ ಆತಂಕದ ಮತ್ತು ವಿಷಾದದ ಸಂಗತಿಯೆಂದರೆ ವಕೀಲರನ್ನು ನೇಮಿಸಿಕೊಂಡು ಜಾಮೀನು ಪಡೆಯುವ ಸಾಮರ್ಥ್ಯವಿಲ್ಲದ ಲಕ್ಷಾಂತರ ಮಂದಿ ವಿಚಾರಣಾಧೀನ ಕೈದಿಗಳಾಗಿ ದೇಶದ ಹಲವಾರು ಜೈಲುಗಳಲ್ಲಿ ಯಾತನೆ ಪಡುತ್ತಿದ್ದಾರೆ. ಮಾನವ ಹಕ್ಕುಗಳ ಪರ ಹೋರಾಟಗಾರರು ಕೂಡ ಸೆರೆಮನೆಗಳಲ್ಲಿ ಇದ್ದಾರೆ. ಹೀಗಾಗಿ ನ್ಯಾಯ ವಂಚಿತ ಜನರಿಗೆ ನ್ಯಾಯವನ್ನು ನೀಡಲು ಕೆಳ ಹಂತದ ನ್ಯಾಯಾಲಯಗಳಲ್ಲಿ ನ್ಯಾಯಾಧೀಶರ ಸಂಖ್ಯೆಯನ್ನು ಹೆಚ್ಚಿಸುವುದು ತುರ್ತು ಅಗತ್ಯವಾಗಿದೆ. ಜನಸಾಮಾನ್ಯರಿಗೆ ನ್ಯಾಯದಾನ ಮಾಡುವುದು ವಿಳಂಬವಾದರೆ ಅವರು ವ್ಯವಸ್ಥೆಯ ಮೇಲೆ ನಂಬಿಕೆಯನ್ನು ಕಳೆದುಕೊಳ್ಳುತ್ತಾರೆ. ಹಾಗಾಗದಂತೆ ಸರಕಾರ ಎಚ್ಚರ ವಹಿಸಬೇಕು.

ಕೆಳಹಂತದ ನ್ಯಾಯಾಲಯಗಳಿಂದ ಹಿಡಿದು ಸರ್ವೋಚ್ಚ ನ್ಯಾಯಾಲಯದವರೆಗೆ ಖಾಲಿ ಉಳಿದಿರುವ ಹುದ್ದೆಗಳ ಭರ್ತಿಗೆ ಹಾಗೂ ಅಗತ್ಯವಿರುವ ನ್ಯಾಯಾಧೀಶರ ನೇಮಕದ ವಿಷಯದಲ್ಲಿ ಇನ್ನು ವಿಳಂಬವಾಗಬಾರದು. ಕೇಂದ್ರ ಸರಕಾರ ಇದನ್ನು ಪ್ರತಿಷ್ಠೆಯ ವಿಷಯವನ್ನಾಗಿ ಮಾಡಿಕೊಳ್ಳಬಾರದು. ಜನಸಾಮಾನ್ಯರಿಗೆ ನ್ಯಾಯ ಒದಗಿಸುವುದು ಸರಕಾರದ ಮೊದಲ ಆದ್ಯತೆ ಆಗಬೇಕು. ಜೊತೆಗೆ ನ್ಯಾಯಾಲಯದ ವ್ಯವಸ್ಥೆಯಲ್ಲಿ ಆಮೂಲಾಗ್ರ ಬದಲಾವಣೆ ತರುವುದು ಕೂಡ ಅಗತ್ಯವಾಗಿದೆ.



ಕಲಬುರಗಿ 16 ಪ್ರಕರಣಗಳಲ್ಲಿ ವಶಪಡಿಸಿಕೊಂಡ 13 ಕೆಜಿ ಗಾಂಜಾ ನಾಶ

ಕಲಬುರಗಿ: ಕಲಬುರಗಿ ಜಿಲ್ಲೆಯಲ್ಲಿ ಎನ್‌ಡಿಪಿಎಸ್ ಕಾಯ್ದೆಯಡಿ ವಿವಿಧ ಪ್ರಕರಣಗಳಲ್ಲಿ ವಶಪಡಿಸಿಕೊಂಡಿದ್ದ 13 ಕೆಜಿ 845 ಗ್ರಾಂ ಗಾಂಜಾವನ್ನು ಜಿಲ್ಲಾ ಮಾದಕ ವಸ್ತುಗಳ ವಿಲೇವಾರಿ ಸಮಿತಿಯ ವತಿಯಿಂದ ನಿಯಮಾನುಸಾರ ನಾಶಪಡಿಸಲಾಯಿತು.

ಜಿಲ್ಲೆಯ ವಿವಿಧ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ಅಕ್ರಮವಾಗಿ ಗಾಂಜಾ ಬೆಳೆಯುವುದು, ಸಾಗಾಟ ಮತ್ತು ಮಾರಾಟ ಮಾಡುತ್ತಿದ್ದವರ ವಿರುದ್ಧ ದಾಖಲಾದ ಒಟ್ಟು 16 ಪ್ರಕರಣಗಳಲ್ಲಿ ವಶಪಡಿಸಿಕೊಂಡಿದ್ದ ಗಾಂಜಾವನ್ನು, ಜಿಲ್ಲಾ ಮಾದಕ ವಸ್ತುಗಳ ವಿಲೇವಾರಿ ಸಮಿತಿಯ ಅನುಮತಿ ಪಡೆದು ಚಿತ್ತಾಪುರ ಪೊಲೀಸ್ ಠಾಣೆ ವ್ಯಾಪ್ತಿಯ ಓರಿಯಂಟ್ ಸಿಮೆಂಟ್ ಕಾರ್ಖಾನೆ ಆವ'ರ'ಣದ'ಲ್ಲಿ ನಾಶಪಡಿಸಲಾಯಿತು.

ಮಾದಕ ವಸ್ತುಗಳ ಅಕ್ರಮ ಜಾಲವನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ನಿರಂತರ ಕಾರ್ಯಾಚರಣೆ ನಡೆಸುತ್ತಿದ್ದು, ವಶಪಡಿಸಿಕೊಳ್ಳಲಾದ ಮಾದಕ ವಸ್ತುಗಳನ್ನು ನ್ಯಾಯಾಲಯ ಹಾಗೂ ಸಂಬಂಧಿತ ಪ್ರಾಧಿಕಾರಗಳ ಅನ'ುವ'ುತಿಯ'ಂತೆ ನಿಯಮಬದ್ಧವಾಗಿ ವಿಲೇವಾರಿ ಮಾಡಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಗಾಂಜಾ ನಾಶಪಡಿಸುವ ಪ್ರಕ್ರಿಯೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು, ಡಿವೈಎಸ್ಪಿಗಳಾದ ಶಂಕರಗೌಡ ಪಾಟೀಲ ಮತ್ತು ಸಂಗಮನಾಥ ಹಿರೇಮಠ ಸೇರಿದಂತೆ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ದೇಶದ ರಿಯಲ್ ಎಸ್ಟೇಟ್ ಮೇಲೆ ಯುದ್ಧದ ಕಾರ್ಮೋಡ: 7 ನಗರಗಳಲ್ಲಿ ವಸತಿ ಮಾರಾಟ ಕುಸಿತ

ಈ ಮಾರಾಟ ಕುಸಿತದ ಹಿಂದಿರುವ ಮತ್ತೊಂದು ಪ್ರಮುಖ ಆಂತರಿಕ ಕಾರಣವೆಂದರೆ ಆಕಾಶದೆತ್ತರಕ್ಕೆ ಏರುತ್ತಿರುವ ಮನೆಗಳ ಬೆಲೆ. ಕಳೆದ ಕೆಲವು ತ್ರೈಮಾಸಿಕಗಳಿಂದ ನಿರಂತರವಾಗಿ ವಸತಿ ಯೋಜನೆಗಳ ಬೆಲೆಯಲ್ಲಿ ಭಾರಿ ಏರಿಕೆಯಾಗುತ್ತಿದೆ. ನಿರ್ಮಾಣ ಸಾಮಗ್ರಿಗಳ ವೆಚ್ಚ ಹೆಚ್ಚಳ ಹಾಗೂ ಜಾಗದ ಬೆಲೆ ಏರಿಕೆಯ ನೆಪದಲ್ಲಿ ಬಿಲ್ಡರ್‌ಗಳು ಪ್ರತಿ ಚದರ ಅಡಿಯ ದರವನ್ನು ಗಣನೀಯವಾಗಿ ಹೆಚ್ಚಿಸಿದ್ದಾರೆ. ಬ್ಯಾಂಕ್ ಗೃಹ ಸಾಲದ ಬಡ್ಡಿ ದರಗಳು ಕೂಡ ಗರಿಷ್ಠ ಮಟ್ಟದಲ್ಲಿ ಮುಂದುವರಿದಿರುವುದರಿಂದ ಇಎಂಐ ಹೊರೆ ವಿಪರೀತವಾಗಿದೆ. ಇದರಿಂದಾಗಿ ಮಧ್ಯಮ ವರ್ಗದ ಖರೀದಿದಾರರಿಗೆ ಸ್ವಂತ ಮನೆ ಎಂಬುದು ದುಬಾರಿ ಕನಸಾಗಿ ಪರಿಣಮಿಸಿದೆ

ಜಾಗತಿಕ ಮಟ್ಟದಲ್ಲಿ ನಡೆಯುತ್ತಿರುವ ಭೌಗೋಳಿಕ ರಾಜಕೀಯ ಬೆಳವಣಿಗೆಗಳು, ವಿಶೇಷವಾಗಿ ಪಶ್ಚಿಮ ಏಷ್ಯಾದಲ್ಲಿನ ಯುದ್ಧದ ಕಾರ್ಮೋಡಗಳು ಇದೀಗ ಭಾರತದ ರಿಯಲ್ ಎಸ್ಟೇಟ್ ವಲಯದ ಮೇಲೂ ಗಂಭೀರ ಪರಿಣಾಮ ಬೀರಲಾರಂಭಿಸಿವೆ. ಆರ್ಥಿಕ ಅನಿಶ್ಚಿತತೆ ಹಾಗೂ ನಿರಂತರ ಬೆಲೆ ಏರಿಕೆಯ ಬಿಸಿಯಿಂದಾಗಿ ಗ್ರಾಹಕರು ಮನೆ ಖರೀದಿಸುವ ತಮ್ಮ ನಿರ್ಧಾರವನ್ನು ಮುಂದೂಡುತ್ತಿದ್ದು, ಪರಿಣಾಮವಾಗಿ ವಸತಿ ಮಾರುಕಟ್ಟೆಯಲ್ಲಿ ಮಂಕು ಕವಿದಿದೆ. ಇದರ ನೇರ ಪರಿಣಾಮವಾಗಿ ದೇಶದ ಏಳು ಪ್ರಮುಖ ನಗರಗಳಲ್ಲಿ ಮನೆಗಳ ಮಾರಾಟ ಪ್ರಮಾಣವು ಗಣನೀಯವಾಗಿ ಇಳಿಕೆ ಕಂಡಿದೆ. ಇತ್ತೀಚಿನ ವರದಿಗಳ ಪ್ರಕಾರ, ಪ್ರಸಕ್ತ ಆರ್ಥಿಕ ವರ್ಷದ ಎರಡನೇ ತ್ರೈಮಾಸಿಕದಲ್ಲಿ ವಸತಿ ಮಾರಾಟವು ಶೇಕಡಾ 6ರಷ್ಟು ಕುಸಿತ ಕಂಡಿರುವುದು ರಿಯಲ್ ಎಸ್ಟೇಟ್ ಮಾರುಕಟ್ಟೆಯ ಚಿತ್ರಣವನ್ನು ಅನಾವರಣಗೊಳಿಸಿದೆ.

ಪ್ರಸಿದ್ಧ ರಿಯಲ್ ಎಸ್ಟೇಟ್ ಸಂಶೋಧನಾ ಮತ್ತು ಸಲಹಾ ಸಂಸ್ಥೆಯಾದ ಅನಾರಾಕ್ () ಬಿಡುಗಡೆ ಮಾಡಿರುವ ನೂತನ ವರದಿಯ ಪ್ರಕಾರ, ಪ್ರಸಕ್ತ ವರ್ಷದ ಎರಡನೇ ತ್ರೈಮಾಸಿಕದಲ್ಲಿ ದೇಶದ ಪ್ರಮುಖ 7 ನಗರಗಳಲ್ಲಿ ಮನೆಗಳ ಮಾರಾಟದಲ್ಲಿ ನಿಖರವಾಗಿ ಶೇ. 6ರಷ್ಟು ಕುಸಿತ ದಾಖಲಾಗಿದೆ. ಆದರೆ ಇದೇ ಅವಧಿಯಲ್ಲಿ ಆಶ್ಚರ್ಯಕರ ಬೆಳವಣಿಗೆಯೆಂಬಂತೆ, ಹೊಸ ವಸತಿ ಯೋಜನೆಗಳ ಬಿಡುಗಡೆಯ ಪ್ರಮಾಣದಲ್ಲಿ ಶೇ. 7ರಷ್ಟು ಏರಿಕೆಯಾಗಿದೆ. ಒಂದು ಕಡೆ ಮನೆಗಳ ಮಾರಾಟ ಇಳಿಕೆಯಾಗುತ್ತಿದ್ದರೆ, ಇನ್ನೊಂದೆಡೆ ಹೊಸ ಪ್ರಾಜೆಕ್ಟ್‌ಗಳ ಸಂಖ್ಯೆ ಹೆಚ್ಚಾಗುತ್ತಿರುವುದು ನಿರ್ಮಾಣಕಾರರು ಮತ್ತು ಖರೀದಿದಾರರ ನಡುವಿನ ಬೇಡಿಕೆ ಮತ್ತು ಪೂರೈಕೆಯ ಅಸಮತೋಲನವನ್ನು ಸ್ಪಷ್ಟವಾಗಿ ತೋರಿಸುತ್ತಿದೆ.

ಈ ದಿಢೀರ್ ಕುಸಿತಕ್ಕೆ ಪ್ರಮುಖ ಕಾರಣ ಪಶ್ಚಿಮ ಏಷ್ಯಾದಲ್ಲಿ ಭುಗಿಲೆದ್ದಿರುವ ಯುದ್ಧದ ಭೀತಿ ಮತ್ತು ಸಂಘರ್ಷ. ಜಾಗತಿಕ ಮಟ್ಟದಲ್ಲಿ ನಿರ್ಮಾಣವಾಗಿರುವ ಈ ಯುದ್ಧದ ವಾತಾವರಣವು ಜಾಗತಿಕ ಆರ್ಥಿಕತೆಯ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ. ಇದು ನೇರವಾಗಿ ಹೂಡಿಕೆದಾರರು ಮತ್ತು ಸಾಮಾನ್ಯ ಗ್ರಾಹಕರ



ಮನಸ್ಥಿತಿಯ ಮೇಲೆ ನಕಾರಾತ್ಮಕ ಪ್ರಭಾವ ಬೀರಿದ್ದು, ದೊಡ್ಡ ಮೊತ್ತದ ಬಂಡವಾಳ ಹೂಡಿಕೆ ಮಾಡಲು ಜನ ಹಿಂದೇಟು ಹಾಕುತ್ತಿದ್ದಾರೆ. ಭವಿಷ್ಯದ ಆರ್ಥಿಕ ಅನಿಶ್ಚಿತತೆಯ ಈ ಸಂದರ್ಭದಲ್ಲಿ ಹಣವನ್ನು ರಿಯಲ್ ಎಸ್ಟೇಟ್‌ನಲ್ಲಿ ತೊಡಗಿಸುವ ಬದಲು ಉಳಿತಾಯ ಮಾಡುವುದು ಹೆಚ್ಚು ಸುರಕ್ಷಿತ ಎಂಬ ಭಾವನೆ ಗ್ರಾಹಕರಲ್ಲಿ ಮೂಡಿರುವುದರಿಂದ, ವಸತಿ ಬೇಡಿಕೆಗೆ ಭಾರಿ ಪೆಟ್ಟು ಬಿದ್ದಿದೆ.

ಮಾರಾಟ ಕುಸಿತದ ಅಂಕಿ-ಅಂಶಗಳನ್ನು ನಗರವಾರು ಗಮನಿಸಿದರೆ, ಮಹಾರಾಷ್ಟ್ರದ ಪ್ರಮುಖ ನಗರಗಳಲ್ಲಿ ಇದರ ಬಿಸಿ ಅತಿ ಹೆಚ್ಚು ತಟ್ಟಿದೆ. ಐಟಿ ಮತ್ತು ಆಟೋಮೊಬೈಲ್ ಉದ್ಯಮಕ್ಕೆ ಹೆಸರಾದ ಹಾಗೂ ಅತಿ ಹೆಚ್ಚು ಉದ್ಯೋಗಿಗಳನ್ನು ಹೊಂದಿರುವ ಪುಣೆಯಲ್ಲಿ ಮನೆಗಳ ಮಾರಾಟವು ಬರೋಬ್ಬರಿ ಶೇ. 15ರಷ್ಟು ಕುಸಿದಿದೆ. ಅದೇ ರೀತಿ, ದೇಶದ ವಾಣಿಜ್ಯ ರಾಜಧಾನಿ ಮುಂಬೈ ಮತ್ತು ಅದರ ಸುತ್ತಮುತ್ತಲಿನ ಪ್ರದೇಶಗಳಾದ ಮುಂಬೈ ಮೆಟ್ರೋಪಾಲಿಟನ್ ರೀಜನ್ () ವ್ಯಾಪ್ತಿಯಲ್ಲಿ ಮಾರಾಟ ಪ್ರಮಾಣ ಶೇ. 8ರಷ್ಟು ಭಾರಿ ಇಳಿಕೆ ಕಂಡಿದೆ. ಈ ಎರಡು ಪ್ರಮುಖ ನಗರಗಳೇ ರಿಯಲ್ ಎಸ್ಟೇಟ್ ಮಾರುಕಟ್ಟೆಯ ದೊಡ್ಡ ಶಕ್ತಿಯಾಗಿದ್ದು, ಇಲ್ಲಿನ ಕುಸಿತವು ರಾಷ್ಟ್ರೀಯ ಸರಾಸರಿಯನ್ನು ಕೆಳಮಟ್ಟಕ್ಕೆ ಎಳೆದುತಂದಿದೆ.

ಸಿಲಿಕಾನ್ ಸಿಟಿ ಬೆಂಗಳೂರು, ಚೆನ್ನೈ, ಹೈದರಾಬಾದ್, ದೆಹಲಿ ಎನ್‌ಸಿಆರ್ ಹಾಗೂ ಕೋಲ್ಕತ್ತಾ ನಗರಗಳಲ್ಲೂ ವಸತಿ ಮಾರಾಟದ ವೇಗ ತಗ್ಗಿದೆ. ಐಟಿ ವಲಯದ ಮೇಲಿನ ಜಾಗತಿಕ ಆರ್ಥಿಕತೆಯ ಪ್ರಭಾವ ಹಾಗೂ ಉದ್ಯೋಗದ ಅನಿಶ್ಚಿತತೆಯ ಕಾರಣದಿಂದಾಗಿ ಬೆಂಗಳೂರಿನಲ್ಲಿಯೂ ನಿರೀಕ್ಷಿತ ಮಟ್ಟದಲ್ಲಿ ಮನೆಗಳ ಮಾರಾಟವಾಗುತ್ತಿಲ್ಲ. ಬಹುತೇಕ ಯುವ ಹಾಗೂ ಮಧ್ಯಮ ವರ್ಗದ ಖರೀದಿದಾರರು ಮಾರುಕಟ್ಟೆಯ ಪರಿಸ್ಥಿತಿ ಸುಧಾರಿಸುವವರೆಗೆ ಕಾದು ನೋಡುವ ತಂತ್ರಕ್ಕೆ ಮೊರೆಹೋಗಿದ್ದಾರೆ. ದಕ್ಷಿಣ ಭಾರತದ ಪ್ರಮುಖ ಮಾರುಕಟ್ಟೆಯಾಗಿರುವ ಬೆಂಗಳೂರಿನಲ್ಲಿ ಮನೆಗಳ ಬೆಲೆ ಗಗನಕ್ಕೇರಿರುವುದು ಸಹ ಮಾರಾಟದ ವೇಗಕ್ಕೆ ಕಡಿವಾಣ ಹಾಕಿದೆ.

ಒಂದೆಡೆ ವಸತಿ ಮಾರಾಟದಲ್ಲಿ ಇಳಿಕೆಯಾಗಿದ್ದರೂ, ಮತ್ತೊಂದೆಡೆ ಬಿಲ್ಡರ್‌ಗಳು ಹೊಸ ಪ್ರಾಜೆಕ್ಟ್‌ಗಳ ಬಿಡುಗಡೆಯಲ್ಲಿ ಶೇ. 7ರಷ್ಟು ಹೆಚ್ಚಳ ಮಾಡಿರುವುದು ಗಮನಾರ್ಹ. ಆಸಕ್ತಿದಾಯಕ ವಿಚಾರವೆಂದರೆ, ನಿರ್ಮಾಣ ಸಂಸ್ಥೆಗಳು ಈಗ ಕೈಗೆಟಕುವ ದರದ ಮನೆಗಳಿಗಿಂತ ಪ್ರೀಮಿಯಂ ಮತ್ತು ಐಷಾರಾಮಿ ಮನೆಗಳ ನಿರ್ಮಾಣದತ್ತ ಹೆಚ್ಚು ಒಲವು ತೋರುತ್ತಿವೆ. ಹೆಚ್ಚಿನ ಲಾಭಾಂಶದ ನಿರೀಕ್ಷೆಯಿಂದಾಗಿ ಬಿಲ್ಡರ್‌ಗಳು ಬೃಹತ್ ಐಷಾರಾಮಿ ಅಪಾರ್ಟ್‌ಮೆಂಟ್‌ಗಳು ಮತ್ತು ವಿಲಾಗಳನ್ನು ಮಾರುಕಟ್ಟೆಗೆ ಪರಿಚಯಿಸುತ್ತಿದ್ದಾರೆ. ಆದರೆ, ಸಾಮಾನ್ಯ ವರ್ಗದ ಜನರಿಗೆ ಎಟುಕುವ ದರದ ವಸತಿ ಯೋಜನೆಗಳ ಕೊರತೆಯೇ ಈ ಮಾರಾಟ ಕುಸಿತಕ್ಕೆ ಪರೋಕ್ಷವಾಗಿ ಕಾರಣವಾಗಿದೆ ಎಂಬುದು ತಜ್ಞರ ಅಭಿಮತ.

ಈ ಮಾರಾಟ ಕುಸಿತದ ಹಿಂದಿರುವ ಮತ್ತೊಂದು ಪ್ರಮುಖ ಆಂತರಿಕ ಕಾರಣವೆಂದರೆ ಆಕಾಶದೆತ್ತರಕ್ಕೆ ಏರುತ್ತಿರುವ ಮನೆಗಳ ಬೆಲೆ. ಕಳೆದ ಕೆಲವು ತ್ರೈಮಾಸಿಕಗಳಿಂದ ನಿರಂತರವಾಗಿ ವಸತಿ ಯೋಜನೆಗಳ ಬೆಲೆಯಲ್ಲಿ ಭಾರಿ ಏರಿಕೆಯಾಗುತ್ತಿದೆ. ನಿರ್ಮಾಣ ಸಾಮಗ್ರಿಗಳ ವೆಚ್ಚ ಹೆಚ್ಚಳ ಹಾಗೂ ಜಾಗದ ಬೆಲೆ ಏರಿಕೆಯ ನೆಪದಲ್ಲಿ ಬಿಲ್ಡರ್‌ಗಳು ಪ್ರತಿ ಚದರ ಅಡಿಯ ದರವನ್ನು ಗಣನೀಯವಾಗಿ ಹೆಚ್ಚಿಸಿದ್ದಾರೆ. ಬ್ಯಾಂಕ್ ಗೃಹ ಸಾಲದ ಬಡ್ಡಿ ದರಗಳು ಕೂಡ ಗರಿಷ್ಠ ಮಟ್ಟದಲ್ಲಿ ಮುಂದುವರಿದಿರುವುದರಿಂದ ಇಎಂಐ ಹೊರೆ ವಿಪರೀತವಾಗಿದೆ. ಇದರಿಂದಾಗಿ ಮಧ್ಯಮ ವರ್ಗದ ಖರೀದಿದಾರರಿಗೆ ಸ್ವಂತ ಮನೆ ಎಂಬುದು ದುಬಾರಿ ಕನಸಾಗಿ ಪರಿಣಮಿಸಿದೆ.

ಮಾರಾಟ ಕುಸಿತ ಮತ್ತು ಹೊಸ ಯೋಜನೆಗಳ ಹೆಚ್ಚಳದ ನೇರ ಪರಿಣಾಮವೆಂದರೆ ಮಾರಾಟವಾಗದ ಮನೆಗಳ ದಾಸ್ತಾನಿನಲ್ಲಿ ಆಗಿರುವ ಭಾರಿ ಏರಿಕೆ. ದೇಶದ ಪ್ರಮುಖ ಏಳು ನಗರಗಳಲ್ಲಿ ಮಾರಾಟವಾಗದೆ ಉಳಿದಿರುವ ಮನೆಗಳ ಸಂಖ್ಯೆ ದೊಡ್ಡ ಮಟ್ಟದಲ್ಲಿ ಶೇಖರಣೆಯಾಗುತ್ತಿದೆ. ಇದರಿಂದಾಗಿ ಬಿಲ್ಡರ್‌ಗಳು ಹಾಕಿದ ಬಂಡವಾಳ ಮಾರುಕಟ್ಟೆಯಲ್ಲಿಯೇ ಸಿಲುಕಿಕೊಂಡಿದ್ದು, ಡೆವಲಪರ್‌ಗಳು ಆರ್ಥಿಕ ತೊಂದರೆ ಎದುರಿಸುವಂತಾಗಿದೆ. ಮುಂದಿನ ದಿನಗಳಲ್ಲಿ ಈ ದಾಸ್ತಾನನ್ನು ಕರಗಿಸಲು ಬಿಲ್ಡರ್‌ಗಳು ಅನಿವಾರ್ಯವಾಗಿ ಬೆಲೆ ಇಳಿಕೆ ಮಾಡಬೇಕಾದ ಅಥವಾ ಗ್ರಾಹಕರಿಗೆ ವಿಶೇಷ ರಿಯಾಯಿತಿ, ಆಕರ್ಷಕ ಕೊಡುಗೆಗಳನ್ನು ನೀಡಬೇಕಾದ ಒತ್ತಡಕ್ಕೆ ಸಿಲುಕಿದ್ದಾರೆ.

ಈ ವಿದ್ಯಮಾನಗಳ ಬಗ್ಗೆ ರಿಯಲ್ ಎಸ್ಟೇಟ್ ತಜ್ಞರು ಕೂಲಂಕಷ ವಿಶ್ಲೇಷಣೆ ನಡೆಸಿದ್ದು, ವಸತಿ ಮಾರುಕಟ್ಟೆಯು ಪ್ರಸ್ತುತ ತಿದ್ದುಪಡಿ ( ) ಹಂತದಲ್ಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಜಾಗತಿಕ ಮಟ್ಟದಲ್ಲಿ ಪಶ್ಚಿಮ ಏಷ್ಯಾದ ಯುದ್ಧದ ಕಾರ್ಮೋಡಗಳು ಚದುರಿ, ಆರ್ಥಿಕ ಸ್ಥಿರತೆ ಮರಳಿದರೆ ಹಾಗೂ ಡೆವಲಪರ್‌ಗಳು ಬೆಲೆಯನ್ನು ವಾಸ್ತವಿಕ ಮಟ್ಟಕ್ಕೆ ತಂದರೆ ಮಾತ್ರ ಗ್ರಾಹಕರಲ್ಲಿ ಮತ್ತೆ ವಿಶ್ವಾಸ ಮೂಡಲಿದೆ. ಮುಂಬರುವ ಹಬ್ಬದ ಸಂದರ್ಭಗಳ ಮೇಲೆ ರಿಯಲ್ ಎಸ್ಟೇಟ್ ಉದ್ಯಮ ಭಾರಿ ಭರವಸೆ ಇಟ್ಟುಕೊಂಡಿದ್ದು, ಮುಂದಿನ ತ್ರೈಮಾಸಿಕಗಳಲ್ಲಿ ಪರಿಸ್ಥಿತಿ ಸುಧಾರಿಸುವ ಹಾಗೂ ಮನೆಗಳ ಮಾರಾಟ ಮತ್ತೆ ಚೇತರಿಕೆ ಕಾಣುವ ಆಶಾವಾದವನ್ನು ತಜ್ಞರು ವ್ಯಕ್ತಪಡಿಸಿದ್ದಾರೆ.

ಚುನಾವಣಾ ಆಯೋಗದ ಮುಷ್ಟಿಯೊಳಗಿರುವ ಪ್ರಜಾಸತ್ತೆಯೆಂಬ ಗುಬ್ಬಚ್ಚಿ

ಭಾರತೀಯ ಚುನಾವಣಾ ಆಯೋಗದ ನಿರ್ದೇಶನದಂತೆ ಮಂಗಳವಾರದಿಂದ ರಾಜ್ಯಾದ್ಯಂತ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಪ್ರಕ್ರಿಯೆ ಆರಂಭಗೊಂಡಿದೆ. ಯಶಸ್ವಿ ಚುನಾವಣೆಯ ದೃಷ್ಟಿಯಿಂದ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ಅವಶ್ಯವಾಗಿ ನಡೆಯಬೇಕು. ದೇಶಾದ್ಯಂತ ನಡೆಯಲೇ ಬೇಕಾಗಿರುವ ಮತದಾರರ ಪಟ್ಟಿಯ ಪರಿಷ್ಕರಣೆಯನ್ನು ಯಾರೂ ಆಕ್ಷೇಪಿಸುತ್ತಿಲ್ಲ. ಆದರೆ ಈ ಪರಿಷ್ಕರಣೆಯ ಹೆಸರಿನಲ್ಲಿ ಚುನಾವಣಾ ಆಯೋಗದ ಮೂಲಕ ಸರಕಾರ ನಡೆಸುತ್ತಿರುವ ಪೌರತ್ವ ಪರಿಷ್ಕರಣೆಯ ಬಗ್ಗೆ ವ್ಯಾಪಕ ಆಕ್ಷೇಪಗಳು ವ್ಯಕ್ತವಾಗಿವೆ. ಎಸ್‌ಐಆರ್ ಸಂದರ್ಭದಲ್ಲಿ ಚುನಾವಣಾ ಆಯೋಗದ ಮುಂದೆ ಈ ದೇಶದ ಪ್ರಜೆಗಳು ತಮ್ಮ ಪೌರತ್ವವನ್ನು ಸಾಬೀತು ಮಾಡಬೇಕಾಗಿದೆ. ಎಸ್‌ಐಆರ್‌ಗಾಗಿ ಚುನಾವಣಾ ಆಯೋಗ ಕೇಳುತ್ತಿರುವ ದಾಖಲೆಗಳನ್ನು ಈ ದೇಶದ ತಳಸ್ತರದ ಜನರು ಒದಗಿಸುವುದು ಕಷ್ಟಸಾಧ್ಯವಾಗಿದೆ. ಈ ಕಾರಣಕ್ಕಾಗಿಯೇ ಬಿಹಾರ, ಪಶ್ಚಿಮಬಂಗಾಳದಲ್ಲಿ ಲಕ್ಷಾಂತರ ಜನರು ಎಸ್‌ಐಆರ್‌ನಿಂದ ಹೊರಗೆ ಬಿದ್ದಿದ್ದಾರೆ. ಹಾಗೆಂದು ಇವರನ್ನು ಸರಕಾರ ನುಸುಳುಕೋರರು ಎಂದೂ ಘೋಷಿಸಿಲ್ಲ. ಚುನಾವಣಾ ಆಯೋಗದ ಪ್ರಕಾರ ಇವರಿಗೆ ಯಾವುದೇ ಮತದಾನದ ಹಕ್ಕಿಲ್ಲ. ಬಿಜೆಪಿ ಆಡಳಿತವಿರುವ ರಾಜ್ಯದಲ್ಲಿ ಇವರಿಗೆ ಸರಕಾರದ ಕಲ್ಯಾಣ ಯೋಜನೆಗಳೂ ದೊರಕುವುದಿಲ್ಲ. ಎಸ್‌ಐಆರ್ ಮೂಲಕ ತಮ್ಮದೇ ದೇಶದ ಪ್ರಜೆಗಳನ್ನು ದಾಖಲೆಗಳು ಒದಗಿಸಲು ವಿಫಲರಾದ ಕಾರಣಕ್ಕೆ, ವಿದೇಶಿ ನುಸುಳುಕೋರರು ಎನ್ನುವ ಪರೋಕ್ಷ ಹಣೆ ಪಟ್ಟಿಯನ್ನು ನೀಡಲು ಚುನಾವಣಾ ಆಯೋಗ ಹೊರಟಿದೆ. ಆದುದರಿಂದಲೇ ಈ ಪರಿಷ್ಕರಣೆಯ ವಿರುದ್ಧ ಹೋರಾಟಗಳು ನಡೆಯುತ್ತಿವೆ. ದೇಶಾದ್ಯಂತ ಬೀದಿ ಪ್ರತಿಭಟನೆಗಳು ಇದರ ವಿರುದ್ಧ ನಡೆಯುತ್ತಿವೆ. ಇನ್ನೊಂದೆಡೆ ನ್ಯಾಯಾಲಯದಲ್ಲೂ ಹೋರಾಟ ಮುಂದುವರಿದಿದೆ. ಆದರೆ ಸುಪ್ರೀಂಕೋರ್ಟ್ ಎಸ್‌ಐಆರ್‌ನ್ನು ಪರೋಕ್ಷವಾಗಿ ಎತ್ತಿ ಹಿಡಿದಿರುವುದರಿಂದ ಎಸ್‌ಐಆರ್ ಎನ್ನುವ ಉರುಳಿಗೆ ಕೊರಳನ್ನು ಕೊಡದೆ ಬೇರೆ ಉಪಾಯವೇ ಇಲ್ಲ. ಈ ನಿಟ್ಟಿನಲ್ಲಿ ರಾಜ್ಯದಲ್ಲಿ ನಡೆಯುವ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಯಾವುದೇ ಅರ್ಹ ಮತದಾರ ಹೊರಗುಳಿಯದಂತೆ ಏನೆಲ್ಲ ಕ್ರಮಗಳನ್ನು ತೆಗೆದುಕೊಳ್ಳಬೇಕು ಎನ್ನುವುದರ ಬಗ್ಗೆ ಗಮನವನ್ನು ನೀಡುವುದು ಸದ್ಯದ ಅಗತ್ಯವಾಗಿದೆ. ಎಸ್‌ಐಆರ್‌ನಿಂದ ಒಬ್ಬನೇ ಒಬ್ಬ ಅರ್ಹ ಮತದಾರ ಹೊರಗುಳಿದು ಬಿಟ್ಟರೆ ಅದು ಈ ದೇಶದ ಪ್ರಜಾಸತ್ತೆಯ ಸೋಲಾಗುತ್ತದೆ. ಸಂವಿಧಾನದ ಸೋಲಾಗುತ್ತದೆ.

ರಾಜ್ಯದಲ್ಲಿ ಎಸ್‌ಐಆರ್‌ನ್ನು ಯಶಸ್ವಿಗೊಳಿಸಲು ದುಡಿಯುವುದೆಂದರೆ, ಒಬ್ಬನೇ ಒಬ್ಬ ಮತದಾರನೂ ದಾಖಲೆಗಳನ್ನು ನೀಡಲು ವಿಫಲನಾಗಿ ಮತದಾರರ ಪಟ್ಟಿಯಿಂದ ಹೊರ ಬೀಳದಂತೆ ನೋಡಿಕೊಳ್ಳುವುದು. ಈ ನಿಟ್ಟಿನಲ್ಲಿ ಬಿಹಾರ ಮತ್ತು ಪಶ್ಚಿಮಬಂಗಾಳದಲ್ಲಿ ಹೇಗೆ ಲಕ್ಷಾಂತರ ಮತದಾರರು ಎಸ್‌ಐಆರ್‌ನಿಂದ ಹೊರಗುಳಿದಿದ್ದಾರೆ ಎನ್ನುವುದರ ಉದಾಹರಣೆ ನಮ್ಮ ಮುಂದಿದೆ. ಅಲ್ಲಿ ನಡೆದ ಹಸ್ತಕ್ಷೇಪಗಳು, ತಾಂತ್ರಿಕ ಅಡಚಣೆಗಳು, ಒತ್ತಡಗಳು ಇಲ್ಲಿ ನಡೆಯದಂತೆ ನೋಡಿಕೊಳ್ಳುವುದು ಅತ್ಯಗತ್ಯವಾಗಿದೆ. ರಾಜ್ಯ ಸರಕಾರ ಎಸ್‌ಐಆರ್ ಯಶಸ್ವಿಯಾಗಿ ನಡೆಯುವಂತೆ ನೋಡಿಕೊಳ್ಳಲು ಸಾಕಷ್ಟು ಕ್ರಮಗಳನ್ನು ತೆಗೆದುಕೊಂಡಿದೆಯಾದರೂ, ಎಸ್‌ಐಆರ್‌ನ ಯಶಸ್ಸು ಅಧಿಕಾರಿಗಳ ಕೈಯಲ್ಲೇ ಇದೆ. ಇದೊಂದು ರೀತಿಯಲ್ಲಿ ಚುನಾವಣಾ ಆಯೋಗದ ಮುಷ್ಟಿಯೊಳಗಿರುವ ಗುಬ್ಬಚ್ಚಿಯ ಹಾಗೆ. ಬದುಕಿದೆಯೋ ಇಲ್ಲವೋ ಎನ್ನುವುದನ್ನು ಅಂತಿಮವಾಗಿ ಘೋಷಿಸಬೇಕಾದದ್ದು ಚುನಾವಣಾ ಆಯೋಗ. ನಮ್ಮ ಮತದಾನದ ಹಕ್ಕು ಎನ್ನುವ ಗುಬ್ಬಚ್ಚಿ ಬದುಕಿದೆ ಎಂದು ನಾವು ಹೇಳಿದರೆ , ಮುಷ್ಟಿಯೊಳಗೇ ಬಲವಾಗಿ ಅಮುಕಿ ಬಿಟ್ಟು ಇಲ್ಲ ಸತ್ತಿದೆ ಎಂದು ಘೋಷಿಸುವ ಅವಕಾಶ ಚುನಾವಣಾ ಆಯೋಗಕ್ಕಿದೆ. ಗುಬ್ಬಚ್ಚಿಯ ಕತ್ತು ಹಿಸುಕಿ ಸಾಯಿಸಲು ಚುನಾವಣಾ ಆಯೋಗದ ಬಳಿ ಸಾಕಷ್ಟು ನೆಪಗಳಿವೆ ಎನ್ನುವ ಎಚ್ಚರಿಕೆ ಜನರಿಗಿರಬೇಕು.

ರಾಜ್ಯದಲ್ಲಿ ಎಸ್‌ಐಆರ್‌ನಿಂದ ಹೊರಬಿದ್ದವರಿಗೆ ಅಂದರೆ



ಮತದಾನದ ಹಕ್ಕಿಲ್ಲದವರಿಗೆ ಸರಕಾರದ ಯಾವುದೇ ಕಲ್ಯಾಣ ಯೋಜನೆಗಳು ದೊರಕುವುದಿಲ್ಲ ಎಂದು ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಘೋಷಿಸಿದ್ದಾರೆ. ಬಿಜೆಪಿ ಆಡಳಿತವಿರುವ ರಾಜ್ಯಗಳಲ್ಲಿ ಈಗಾಗಲೇ ಈ ನಿರ್ಧಾರವನ್ನು ತೆಗೆದುಕೊಂಡಿದ್ದು, ಎಸ್‌ಐಆರ್‌ನಲ್ಲಿ ಮೋಸಗಳು ನಡೆಯುತ್ತಿವೆ ಎನ್ನುವುದು ಗೊತ್ತಿದ್ದೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಈ ಹೇಳಿಕೆಯನ್ನು ಯಾಕೆ ನೀಡುತ್ತಿದ್ದಾರೆ? ಎನ್ನುವ ಪ್ರಶ್ನೆ ಕಾಂಗ್ರೆಸ್ ವಲಯದಲ್ಲೇ ಎದ್ದಿದೆ. ಆದರೆ ಪರಿಷ್ಕರಣೆಯ ಪ್ರಕ್ರಿಯೆಯನ್ನು ಜನರು ಗಂಭೀರವಾಗಿ ತೆಗೆದುಕೊಳ್ಳುವುದಕ್ಕಾಗಿ ಈ ಹೇಳಿಕೆಯನ್ನು ನೀಡಿದ್ದಾರೆ ಎಂದು ಸದ್ಯಕ್ಕೆ ನಾವು ಭಾವಿಸಬೇಕಾಗಿದೆ. ಎಸ್‌ಐಆರ್‌ನಿಂದ ಹೊರಬಿದ್ದವರಿಗೆ ಮತದಾನದ ಹಕ್ಕಿಲ್ಲ ಎಂದರೆ ಯಾರೂ ಗಂಭೀರವಾಗಿ ತೆಗೆದುಕೊಳ್ಳುವುದಿಲ್ಲ. ಯಾಕೆಂದರೆ ಈ ನಾಡಿನ ಬಹುತೇಕ ಮಂದಿ ಮತದಾನವನ್ನು ಗಂಭೀರವಾಗಿ ತೆಗೆದುಕೊಂಡೇ ಇಲ್ಲ. ಯಾರು ಗೆದ್ದರೇನು, ಯಾರು ಸೋತರೇನು? ಎನ್ನುವ ಮನಸ್ಥಿತಿಯ ಜನರ ಸಂಖ್ಯೆ ಇಲ್ಲಿ ದೊಡ್ಡದಿದೆ. ಕೂಲಿ ಕಾರ್ಮಿಕರು, ರೈತರು, ವಲಸೆ ಕಾರ್ಮಿಕರು ತಮ್ಮ ದೈನಂದಿನ ಕೆಲಸಗಳನ್ನು ಬಿಟ್ಟು ಇದರ ಹಿಂದೆ ಅಲೆದಾಡುವುದಕ್ಕೆ ಸಿದ್ಧರಿರುವುದಿಲ್ಲ. ಆದರೆ ಯಾವಾಗ ಎಸ್‌ಐಆರ್‌ನಿಂದ ಹೊರಗೆ ಬಿದ್ದರೆ ಸರಕಾರಿ ಯೋಜನೆಗಳು ದೊರಕುವುದಿಲ್ಲ ಎಂದು ಗೊತ್ತಾಗುತ್ತದೆಯೋ ಆಗ ಅನಿವಾರ್ಯವಾಗಿ, ಈ ಪರಿಷ್ಕರಣೆಯನ್ನು ಎಲ್ಲ ವರ್ಗದ ಜನರು ಗಂಭೀರವಾಗಿ ತೆಗೆದುಕೊಳ್ಳಬಹುದು. ಎಸ್‌ಐಆರ್‌ನಲ್ಲಿ ಹೆಸರಿಲ್ಲದಿದ್ದರೆ ಗ್ಯಾರಂಟಿ ಯೋಜನೆಗಳು ಕೈತಪ್ಪಬಹುದು ಎಂಬ ಭಯಕ್ಕಾದರೂ ಈ ಪ್ರಕ್ರಿಯೆಯಲ್ಲಿ ಜನರು ಭಾಗವಹಿಸುವುದು ಅತ್ಯಗತ್ಯವಾಗಿದೆ. ಯಾವ ಮೋಸ, ವಂಚನೆ, ತಾಂತ್ರಿಕ ಅಡಚಣೆಗಳಿಲ್ಲದೆ ಎಸ್‌ಐಆರ್‌ನ್ನುಯಶಸ್ವಿಯಾಗಿ ನಡೆಸಿ ಯಾವುದೇ ಅರ್ಹ ಮತದಾರರು ಹೊರಬೀಳದಂತೆ ನೋಡಿಕೊಂಡ ಬಳಿಕ ಸರಕಾರಿ ಯೋಜನೆಗಳನ್ನು ಯಾರಿಗೆ ಕೊಡಬೇಕು, ಕೊಡಬಾರದು ಎನ್ನುವುದನ್ನು ಸರಕಾರ ನಿರ್ಧರಿಸಬೇಕು.

ಎಸ್‌ಐಆರ್‌ನಿಂದ ಮತದಾರರು ಹೇಗೆಲ್ಲ ಹೊರಗುಳಿದರು ಎನ್ನುವುದಕ್ಕೆ ಬಿಹಾರ, ಪಶ್ಚಿಮಬಂಗಾಳ ಉದಾಹರಣೆಯಾಗಿ ನಮ್ಮ ಮುಂದಿವೆ. ಅದರ ಪರಿಣಾಮ ಏನಾಯಿತು ಎನ್ನುವುದನ್ನೂ ಕಂಡಿದ್ದೇವೆ. ಮೊದಲನೆಯದಾಗಿ, ಕೆಲವು ನಿರ್ದಿಷ್ಟ ಸಮುದಾಯವನ್ನು ಉದ್ದೇಶಪೂರ್ವಕವಾಗಿ ಹೊರಗಿಡುವ ಪ್ರಯತ್ನ ನಡೆಯಿತು. ಮುಖ್ಯವಾಗಿ ಮುಸ್ಲಿಮ್ ಸಮುದಾಯವನ್ನೇ ಗುರಿಯಾಗಿಟ್ಟುಕೊಂಡು ಬೇರೆ ಬೇರೆ ನೆಪಗಳನ್ನು ಒಡ್ಡಿ ಅವರನ್ನು ಮತದಾರರ ಪಟ್ಟಿಯಿಂದ ಹೊರಗಿಟ್ಟ ಉದಾಹರಣೆಗಳಿವೆ. ಎರಡನೆಯದಾಗಿ, ಪಟ್ಟಿಯಿಂದ ಹೊರಬಿದ್ದವರು ಕೂಲಿ ಕಾರ್ಮಿಕರು, ವಲಸೆ ಕಾರ್ಮಿಕರು. ತಮ್ಮ ದೈನಂದಿನ ಕೂಲಿ ಕೆಲಸಗಳನ್ನು ಬಿಟ್ಟು ಇದರ ಹಿಂದೆ ಅಲೆದಾಡುವ ಶಕ್ತಿ ಅವರಿಗಿಲ್ಲದ ಕಾರಣ ಎಸ್‌ಐಆರ್‌ನಲ್ಲಿ ಅವರು ಸಕ್ರಿಯವಾಗಿ ಭಾಗವಹಿಸಿಲ್ಲ. ಹಾಗೆಯೇ ಈ ವರ್ಗದ ಜನರು ಚುನಾವಣಾ ಆಯೋಗ ಕೇಳುವ ದಾಖಲೆಗಳನ್ನು ಒದಗಿಸಲು ವಿಫಲರಾದರು. ಕರ್ನಾಟಕದಲ್ಲೂ ವಲಸೆ ಕಾರ್ಮಿಕರ ಸಂಖ್ಯೆ ದೊಡ್ಡದಿದೆ. ಇವರೆಲ್ಲ ಬಿಹಾರ, ಮಧ್ಯಪ್ರದೇಶ, ಪಶ್ಚಿಮಬಂಗಾಳದಿಂದ ಬಂದವರಷ್ಟೇ ಅಲ್ಲ. ಉತ್ತರ ಕರ್ನಾಟಕದಿಂದ ಕೃಷಿಯಲ್ಲಿ ಸೋತು ನಗರಕ್ಕೆ ವಲಸೆ ಬಂದವರ ಸಂಖ್ಯೆ ದೊಡ್ಡದಿದೆ. ಇವರೆಲ್ಲ ಆಸಕ್ತಿಯಿಂದ ಎಸ್‌ಐಆರ್‌ನಲ್ಲಿ ಭಾಗವಹಿಸುತ್ತಾರೆ ಎನ್ನುವಂತಿಲ್ಲ. ಹಾಗೆಯೇ ಭಾಗವಹಿಸಿದರೂ ಚುನಾವಣಾ ಆಯೋಗ ಕೇಳುವ ಎಲ್ಲ ದಾಖಲೆಗಳನ್ನು ಒದಗಿಸಲು ಯಶಸ್ವಿಯಾಗುತ್ತಾರೆ ಎನ್ನುವಂತೆಯೂ ಇಲ್ಲ. ಹಾಗೆಂದು ಇವರನ್ನು ಸರಕಾರ ಕಲ್ಯಾಣ ಯೋಜನೆಗಳಿಂದ ಹೊರಗಿಟ್ಟರೆ, ಅದಕ್ಕಿಂತ ದೊಡ್ಡ ಸಂವಿಧಾನ ವಿರೋಧಿ ಕೃತ್ಯ ಇನ್ನೊಂದಿದೆಯೆ?

ಇದೇ ಸಂದರ್ಭದಲ್ಲಿ ರಾಜಕೀಯ ಒತ್ತಡಗಳು ಬಿಎಲ್‌ಒಗಳ ಮೇಲೆ ಬೀಳದಂತೆಯೂ ನೋಡಿಕೊಳ್ಳಬೇಕು. ಬಿಎಲ್‌ಒಗಳು ನಿರ್ದಿಷ್ಟ ರಾಜಕೀಯ ಅಥವಾ ಕೋಮು ಹಿತಾಸಕ್ತಿಯನ್ನು ಹೊಂದಿದ್ದರೆ ಅವರಿಂದಲೂ ಎಸ್‌ಐಆರ್‌ನಲ್ಲಿ ಸಮಸ್ಯೆಯಾಗಬಹುದು. ಇತರ ರಾಜ್ಯಗಳಲ್ಲಿ ಕೆಲಸಗಳ ಒತ್ತಡದಿಂದ ಹಲವು ಬಿಎಲ್‌ಒಗಳು ಆತ್ಮಹತ್ಯೆ ಮಾಡಿಕೊಂಡಿದ್ದರು. ಹಾಗೆಯೇ ಹೃದಯಾಘಾತಗಳಿಂದಲೂ ಮೃತಪಟ್ಟಿದ್ದರು. ಅಂತಹ ಘಟನೆಗಳು ರಾಜ್ಯಗಳಲ್ಲಿ ನಡೆಯದಂತೆ ನೋಡಿಕೊಳ್ಳುವುದೂ ಸರಕಾರದ ಹೊಣೆಗಾರಿಕೆಯಾಗಿದೆ . ತಾಂತ್ರಿಕ ಅಡಚಣೆಗಳೂ ಎಸ್‌ಐಆರ್ ಮೇಲೆ ಪರಿಣಾಮ ಬೀರಬಹುದು. ಎಸ್‌ಐಆರ್ ಎನ್ನುವುದು ಸ್ವಾತಂತ್ರ್ಯೋತ್ತರ ಭಾರತದ ಪಾಲಿನ ಮಹಾ ಚುನಾವಣೆಯೇ ಆಗಿದೆ. ಈ ಚುನಾವಣೆಯ ಗೆಲುವಿನಲ್ಲೇ ಈ ದೇಶದ ಪ್ರಜಾಸತ್ತೆಯ ಅಳಿವು ಉಳಿವು ನಿರ್ಧಾರವಾಗುತ್ತದೆ. ಈ ಚುನಾವಣೆಯಲ್ಲಿ ಪ್ರಜಾಸತ್ತೆಯನ್ನು ಗೆಲ್ಲಿಸುವುದು ಪ್ರತಿಯೊಬ್ಬ ನಾಗರಿಕರ ಕರ್ತವ್ಯವಾಗಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR